ಸಂಪುಟ : 10 ಸಂಚಿಕೆ: 134 ಪುಟ : 4+2 ಬೆಲೆ: 3.00 ರವಿವಾರ ಜೂನ್ 29 2025 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ

Volume : 10 Issue : 134 Pages : 4+2 Price : 3.00 Sunday June 29 2025 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25




## ನೀರು ಪೂರೈಕೆಯಲ್ಲಿ ವ್ಯತ್ಯಯ; ಟ್ಯಾಂಕರ್ ಮೂಲಕ ಸರಬರಾಜು



■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಅವಳಿ ನಗರದಲ್ಲಿ ಕಳೆದ ಜುಲೈ 19ರಿಂದ 27 ರವರೆಗೆ ವಿವಿಧ ತಾಂತ್ರಿಕ ದೋಷಗಳಿಂದ ತುಂಗಭದ್ರಾ ನದಿ ನೀರು ಪೂರೈಕೆಯಲ್ಲಿ ತೊಂದರೆಯಾಗಿದೆ.

ಈಗಾಗಲೇ ಈ ಕುರಿತು ದಿನವೂ ಪತ್ರಿಕೆಗಳಲ್ಲಿ ಸಾರ್ವಜನಿಕರ ಮಾಹಿತಿಗಾಗಿ ಗಮನಕ್ಕೆ ತರಲಾಗಿದೆ.

ಈಗ ಜು.28ರಿಂದ ಅವಳಿ ನಗರದಲ್ಲಿ ಯಥಾವತ್ತಾಗಿ ತುಂಗಭದ್ರಾ ನದಿಯ ಕುಡಿಯುವ ನೀರಿನ ಪೂರೈಕೆಯನ್ನು ಪ್ರಾರಂಭಿಸಲಾಗಿದೆ. ಒಂದು ವೇಳೆ ನೀರು ಪೂರೈಕೆಯಲ್ಲಿ ವಿಳಂಬವಾದ ಪ್ರದೇಶಗಳಿಗೆ ಈ ಕಚೇರಿಯಿಂದ ನಿಯೋಜಿಸಲಾದ ಟ್ಯಾಂಕರ್ ಗಳ ಮೂಲಕ ನೀರು ಪೂರೈಕೆಯನ್ನು ಉಚಿತವಾಗಿ ಮಾಡಲಾಗುವುದು ಎಂದು ನಗರಸಭೆ ಪೌರಾಯುಕ್ತರು ಹೇಳಿದ್ದಾರೆ. ಹೀಗಾಗಿ ಸಾರ್ವಜನಿಕರು ನಗರಸಭೆ ಕಚೇರಿಯೊಂದಿಗೆ ಸಹಕರಿಸಲು ಹಾಗೂ ಮುಂದಿನ ದಿನಗಳಲ್ಲಿ ವಾರ್ಡ್‌ಗಳಲ್ಲಿ ನೀರಿನ ಪೂರೈಕೆಯ ಸಮಸ್ಯೆ ಉಂಟಾದರೆ ವಾರ್ಡ್ ನಂ. 1 ರಿಂದ 17 – ಕಿರಿಯ ಅಭಿಯಂತರಗಳಾದ ಶ್ರೀ ಮತಿ ಸಿಂಧೂ– ಮೊಬೈಲ್ ಸಂಖ್ಯೆ: 8088498021 ಹಾಗೂ ವಾರ್ಡ್ ನಂ. 18 ರಿಂದ 35 ರವರೆಗೆ ಸಿದ್ದು ಹುಣಸಿಮರದ– ಮೊಬೈಲ್ ಸಂಖ್ಯೆ: 8088782451 ಇವರನ್ನು ಸಂಪರ್ಕಿಸಿ ನೀರಿನ ಟ್ಯಾಂಕರ್ ಪಡೆಯಲು ವಿನಂತಿಸಲಾಗಿದೆ.

ಅಷ್ಟೇ ಅಲ್ಲದೆ ಯಾವುದೇ ಬೋರ್ ವೆಲ್ ಗಳು, ಪೈಪ್ ಲೈನ್ ಇತರೆ ದುರಸ್ತಿ ಬಂದಾಗ ಈ ಮೇಲ್ಕಂಡ ಕಿರಿಯ ಅಭಿಯಂತರರನ್ನು ಸಂಪರ್ಕಿಸಲು ನಗರಸಭೆಯ ಪೌರಾಯುಕ್ತರು ಕೋರಿದ್ದಾರೆ.

### ವಿಜ್ರಂಭಣೆ ಭರದಲ್ಲಿ ದಸರಾದ ಚಾರಿತ್ರಿಕ ಮಹತ್ವ ಮರೆಯಾಗಬಾರದು: ಮುಖ್ಯಮಂತ್ರಿ ಸಿದ್ದರಾಮಯ್ಯ

# ಜನರ ಸುರಕ್ಷತೆಗೆ ಪ್ರಥಮ ಆದ್ಯತೆ ಇರಲಿ



■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ವಿಜ್ರಂಭಣೆ ರಭಸದಲ್ಲಿ ದಸರಾದ ಚಾರಿತ್ರಿಕ ಮಹತ್ವ ಮರೆಯಾಗಬಾರದು. ಅನಗತ್ಯವಾಗಿ ಹಣ ಖರ್ಚು ಮಾಡುವುದು ವೈಭವ ಅಲ್ಲ. ಜನರ, ಪ್ರವಾಸಿಗರ ಸುರಕ್ಷತೆ ಮತ್ತು ಅನುಕೂಲಕ್ಕೆ ಪ್ರಥಮ ಆದ್ಯತೆ ಇರಲಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚನೆ ನೀಡಿದರು.

ವಿಧಾನಸೌಧದ ಸಮ್ಮೇಳನ ಸಭಾಂಗಣದಲ್ಲಿ ನಾಡಹಬ್ಬ ಮೈಸೂರು ದಸರಾ–2025 ಆಚರಣೆ ಕುರಿತು ನಡೆದ ಉನ್ನತ ಮಟ್ಟದ ಸಮಿತಿ ಸಭೆಯಲ್ಲಿ ಅವರು ಸೂಚನೆಗಳನ್ನು ನೀಡಿದರು.

ಸೆಪ್ಟಂಬರ್ 22ರಂದು ದಸರಾ ಹಬ್ಬಕ್ಕೆ ಚಾಲನೆ ದೊರೆಯಲಿದ್ದು, ಅಕ್ಟೋಬರ್ 2ರಂದು ವಿಜಯದಶಮಿ, ಜಂಬೂ ಸವಾರಿ ನಡೆಯಲಿದೆ. ದಸರಾ ಈ ಬಾರಿ 10 ದಿನಗಳ ಬದಲು 11 ದಿನಗಳ ಕಾಲ ನಡೆಯಲಿದೆ. ದಸರಾಕ್ಕೆ ತನ್ನದೇ ಆದ ಚಾರಿತ್ರಿಕ, ಧಾರ್ಮಿಕ ಮತ್ತು ಸಾಂಸ್ಕೃತಿಕ ಹಿನ್ನೆಲೆಯಿದ್ದು, ಇದಕ್ಕೆ ಪೂರಕವಾಗಿ ದಸರಾ ಆಚರಿಸಲಾಗುವುದು. ವಿಶ್ವ ವಿಖ್ಯಾತ ದಸರಾದ ಪರಂಪರೆಯನ್ನು ಮುಂದುವರೆಸುವ ನಿಟ್ಟಿನಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸಬೇಕು ಎಂದು ಸೂಚಿಸಿದರು.

ಕಳೆದ ವರ್ಷ ದಸರಾ ಆಚರಣೆಗೆ ಒಟ್ಟು ರೂ. 40 ಕೋಟಿ ಅನುದಾನ ಒದಗಿಸಲಾಗಿತ್ತು. ಈ ಬಾರಿ ಅದ್ದೂರಿಯಾಗಿ ದಸರಾ ಆಚರಣೆಗೆ ಅಗತ್ಯವಿರುವ ಅನುದಾನವನ್ನು ಒದಗಿಸಲಾಗುವುದು. ಸರ್ಕಾರದ ಸಾಧನೆಗಳು ಮತ್ತು ಇಲಾಖಾ ಕಾರ್ಯಕ್ರಮಗಳನ್ನು ಸರಿಯಾಗಿ ಪ್ರತಿಬಿಂಬಿಸುವಂತಹ ವಸ್ತು ಪ್ರದರ್ಶನ, ಸ್ತಬ್ಧಚಿತ್ರ ಪ್ರದರ್ಶನ ಆಯೋಜಿಸಬೇಕು. ಅಕ್ಟೋಬರ್ 2ರಂದು ವಿಜಯದಶಮಿ ಬಂದಿರುವ ಕಾರಣ ಸ್ತಬ್ಧ ಚಿತ್ರಗಳಲ್ಲಿ ಗಾಂಧೀಜಿ ವಿಚಾರಧಾರೆಗಳಿಗೆ ಸಹ ಅವಕಾಶ ಕಲ್ಪಿಸಬೇಕು ಎಂದು ತಿಳಿಸಿದರು.

> ಕಳೆದ ಬಾರಿ ಅರಮನೆ ಮುಂದೆ ಆಸನ ವ್ಯವಸ್ಥೆಯನ್ನು 54 ಸಾವಿರಕ್ಕೆ ಹೆಚ್ಚಿಸಲಾಗಿತ್ತು. ಇದರಿಂದಾಗಿ ಜಂಬೂ ಸವಾರಿ ಸಂದರ್ಭದಲ್ಲಿ ಜನದಟ್ಟಣೆ ಉಂಟಾಗಿತ್ತು. ಈ ಬಾರಿ ಜನದಟ್ಟಣೆ ಕಡಿಮೆ ಮಾಡಲು ಕ್ರಮ ಕೈಗೊಳ್ಳಬೇಕಾಗಿದೆ. ಯಾವುದೇ ಕಾರ್ಯಕ್ರಮಗಳ ಸ್ಥಳಗಳಲ್ಲಿ ಯಾವುದೇ ಕಾರಣಕ್ಕೂ ಜನದಟ್ಟಣೆಯಾಗದಂತೆ ಎಚ್ಚರಿಕೆ ವಹಿಸಬೇಕು. ಪ್ರಜಾಪ್ರಭುತ್ವ, ಸಂವಿಧಾನ, ಅಭಿವೃದ್ಧಿ, ಉತ್ತಮ ಆಡಳಿತದ ಆಶಯದಲ್ಲಿ ದಸರಾ ಆಚರಿಸಲಾಗುವುದು.
>
> **– ಡಾ. ಹೆಚ್.ಸಿ. ಮಹದೇವಪ್ಪ.** ಸಚಿವರು.

> ದಸರಾ ಸಂದರ್ಭದಲ್ಲಿ ಜನದಟ್ಟಣೆ ನಿಯಂತ್ರಣಕ್ಕೆ ಹೆಚ್ಚಿನ ಒತ್ತು ನೀಡಬೇಕು. 10 ಲಕ್ಷಕ್ಕೂ ಹೆಚ್ಚು ಜನರು ಸೇರುವ ಸಂದರ್ಭ ಇದಾಗಿದೆ. ವಿದೇಶಿಗರೂ ಹೆಚ್ಚಿನ ಪ್ರಮಾಣದಲ್ಲಿ ಆಗಮಿಸುತ್ತಾರೆ. ಯಾವುದೇ ಕಾರಣಕ್ಕೂ ಅನಾಹುತ ಸಂಭವಿಸದಂತೆ ಎಲ್ಲಾ ಕಡೆ ಮುನ್ನೆಚ್ಚರಿಕೆ ವಹಿಸಬೇಕು. ಪೊಲೀಸರು ಜನಸ್ನೇಹಿಯಾಗಿ ಕರ್ತವ್ಯ ನಿರ್ವಹಿಸಬೇಕು. ಕಾನೂನು ಸುವ್ಯವಸ್ಥೆಗೆ ಯಾವುದೇ ಧಕ್ಕೆಯಾಗದಂತೆ ನೋಡಿಕೊಳ್ಳಬೇಕು. ಚಾಮುಂಡಿ ಬೆಟ್ಟಕ್ಕೆ ಹೋಗುವ ರಸ್ತೆ, ಕೆಆರ್‌ಎಸ್‌ಗೆ ಹೋಗುವ ರಸ್ತೆ ಸೇರಿದಂತೆ ಎಲ್ಲಾ ಪ್ರಮುಖ ರಸ್ತೆಗಳ ದುರಸ್ತಿ ಕಾರ್ಯವನ್ನು ಈಗಲೇ ಆರಂಭಿಸಬೇಕು ಎಂದು ಸಿಎಂ ಸಿದ್ದರಾಮಯ್ಯ ಸೂಚನೆ ನೀಡಿದರು.

ದಸರಾ ಸಂದರ್ಭದಲ್ಲಿ ಅಧಿಕಾರಿಗಳು ▸▸3ನೇ ಪುಟಕ್ಕೆ

## ಅರ್ಧಕ್ಕೆ ನಿಂತ ಕಾಮಗಾರಿ ಪೂರ್ಣಗೊಳಿಸಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಹಾವಳಿ ಆಂಜನೇಯ ದೇವಸ್ಥಾನದಿಂದ ಭರಮದೇವರ ಸರ್ಕಲ್‌ವರೆಗೆ ಪುರಸಭೆಯ 15ನೇ ಹಣಕಾಸಿನಲ್ಲಿ ನಡೆಯುತ್ತಿರುವ ಕಾಮಗಾರಿ ತಿಂಗಳುಗಳಿಂದ ಅರ್ಧಕ್ಕೆ ನಿಂತಿದ್ದು, ಸಾರ್ವಜನಿಕರು ತೊಂದರೆ ಅನುಭವಿಸುತ್ತಿದ್ದಾರೆ. ಕೂಡಲೇ ಕಾಮಗಾರಿ ಪ್ರಾರಂಭಿಸಬೇಕು ಎಂದು ಶನಿವಾರ ಮಂಜುನಾಥ ಮಾಗಡಿ, ನಾಗರಾಜ ಚಿಂಚಲಿ ಅವರನ್ನೊಳಗೊಂಡು ಸಾರ್ವಜನಿಕರು ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ ಅವರನ್ನು ಸಾರ್ವಜನಿಕವಾಗಿಯೇ ತರಾಟೆಗೆ ತೆಗೆದುಕೊಂಡರು.


ಈ ವೇಳೆ ಮಾತನಾಡಿದ ಮಂಜುನಾಥ ಮಾಗಡಿ, ಕಳಪೆ ಗುಣಮಟ್ಟದ ಮಣ್ಣನ್ನು ಹಾಕಲಾಗಿದ್ದರೂ ಅಧಿಕಾರಿಗಳು ಮತ್ತು ಜನಪ್ರತಿನಿಧಿಗಳು ಸೇರಿ ಕಳಪೆ ಮಣ್ಣನ್ನೇ ಗುಣಮಟ್ಟದ ಮಣ್ಣೆಂದು ತಪ್ಪು ವರದಿ ಮಾಡಿಸಿ ಜನರ ಕಣ್ಣಿಗೆ ಮಣ್ಣೆರಚುತ್ತ ಗುತ್ತಿಗೆದಾರರ ಶ್ರೀರಕ್ಷೆಗೆ ನಿಂತಿದ್ದೀರಿ. ಈಗಾಗಲೇ ಅರ್ಧಕ್ಕೆ ನಿಂತಿರುವ ಕಾಮಗಾರಿ ಪೂರ್ಣಗೊಳಿಸಿ ಮುಂದುವರೆದ ಕಾಮಗಾರಿ ಪ್ರಾರಂಭಿಸಿದರೆ ಸಾರ್ವಜನಕರಿಗೆ ಅನಕೂಲವಾಗುತ್ತದೆ. ಕಳಪೆ ಕಾಮಗಾರಿ ವಿರೋಧಿಸುವವರ ವಿರುದ್ಧ ಇಲ್ಲಸಲ್ಲದ ಆರೋಪ ಮಾಡುತ್ತಿರುವುದು ಸರಿಯಲ್ಲ. ಈ ಬಗ್ಗೆ ಸಾರ್ವಜನಿಕರಿಂದ ಲೋಕಾಯುಕ್ತಕ್ಕೆ ದೂರು ಸಲ್ಲಿಸಲಾಗುವುದು. ತಿಂಗಳುಗಳಿಂದ ಅರ್ಧಕ್ಕೆ ನಿಂತಿರುವ ಮುಖ್ಯ ಬಜಾರ್ ರಸ್ತೆ ಕಾಮಗಾರಿಯನ್ನು ಕೂಡಲೇ ಪ್ರಾರಂಭಿಸಬೇಕು ಮತ್ತು ಅದು ಗುಣಮಟ್ಟದಿಂದ ಕೂಡಿರಬೇಕು. ಇಲ್ಲದಿದ್ದರೆ ಸಾರ್ವಜನಿಕರೊಡಗೂಡಿ ಪ್ರತಿಭಟನೆ ಮಾಡಲಾಗುತ್ತದೆ ಎಂದರು. ಈ ವೇಳೆ ಹಿರಿಯ ಆರೋಗ್ಯ ನೀರೀಕ್ಷಕ ಮಂಜುನಾಥ ಮುದಗಲ್, ಮಲ್ಲಿಕಾರ್ಜುನ ಅಂಕಲಿ ಸೇರಿ ಅಟೋ ಚಾಲಕರು, ಸಾರ್ವಜನಿಕರು ಇದ್ದರು.

### ಬೇಡಿಕೆ ಈಡೇರದಿದ್ದಲ್ಲಿ ಜುಲೈ 10ರಂದು ಬೃಹತ್ ಪ್ರತಿಭಟನೆ: ಡಾ. ಹನುಮಂತಗೌಡ ಆರ್.ಕಲ್ಮನಿ

# ಅತಿಥಿ ಉಪನ್ಯಾಸಕರನ್ನು ಆಯ್ಕೆಗೆ ಪರಿಗಣಿಸಿ

■ ವಿಜಯಸಾಕ್ಷಿ ಸುದ್ದಿ, ಗದಗ

ಅಧಿಕಾರಕ್ಕೆ ಬರುವ ಮುನ್ನ ಕಾಂಗ್ರೆಸ್ ತನ್ನ ಪ್ರಣಾಳಿಕೆಯಲ್ಲಿ ಸರಕಾರಿ ಪ್ರಥಮದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರನ್ನು ಖಾಯಂಗೊಳಿಸುವ ಭರವಸೆ ನೀಡಿ ಈಗ ಕಾನೂನು ತೊಡಕು ಎಂಬ ನೆಪ ಮುಂದಿಡುತ್ತಿದ್ದಾರೆ. ಕಾನೂನು ತೊಡಕುಗಳಿಗೆ ಅವಕಾಶ ನೀಡದೆ ಎಲ್ಲ ಅತಿಥಿ ಉಪನ್ಯಾಸಕರನ್ನ ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಬೇಕು. ಇಲ್ಲವಾದಲ್ಲಿ ಜುಲೈ 10ರಂದು ನಗರದ ಮುನ್ಸಿಪಲ್ ಮೈದಾನದಿಂದ ಜಿಲ್ಲಾಡಳಿತ ಭವನದವರೆಗೆ ಪ್ರತಿಭಟನೆ ಹಮ್ಮಿಕೊಂಡಿರುವುದಾಗಿ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದ ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಆರ್.ಕಲ್ಮನಿ ತಿಳಿಸಿದರು.



ನಗರದ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, ರಾಜ್ಯದಲ್ಲಿ ಸುಮಾರು 430 ಪ್ರಥಮದರ್ಜೆ ಕಾಲೇಜುಗಳಿದ್ದು, ಪ್ರಸಕ್ತ 2025–26ನೇ ಶೈಕ್ಷಣಿಕ ಸಾಲಿಗೆ ಸರಕಾರಿ ಪದವಿ ಕಾಲೇಜುಗಳಿಗೆ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಗೆ ಈಗಾಗಲೇ ಅರ್ಜಿ ಆಹ್ವಾನಿಸಿದ್ದು ಸ್ವಾಗತಾರ್ಹ. ಆದರೆ ಶೈಕ್ಷಣಿಕ ಅರ್ಹತೆ ಮತ್ತು ಸೇವಾನುಭವ ಇದ್ದವರನ್ನು ಮಾತ್ರ ಆಯ್ಕೆಗೆ ಪರಿಗಣಿಸಲಾಗುವುದು ಎಂದು ಉನ್ನತ ಶಿಕ್ಷಣ ಇಲಾಖೆ ತಿಳಿಸಿರುವುದು ಸಮಂಜಸವಲ್ಲ ಎಂದು ಹೇಳಿದರು.

ಅತಿಥಿ ಉಪನ್ಯಾಸಕರ ಆಯ್ಕೆಗೆ ಎಂ.ಫಿಲ್ ಪದವಿಯನ್ನು ಶೈಕ್ಷಣಿಕ ಅರ್ಹತೆ ಎಂದು ಪರಿಗಣಿಸಬೇಕು. ಆ ಮೂಲಕ ನೂರಾರು ಜನ ಎಂ.ಫಿಲ್ ಪದವೀಧರರ ಆತಂಕಕ್ಕೆ ತೆರೆ ಎಳೆಯಬೇಕು. ಈ ಬಗ್ಗೆ ಉನ್ನತ ಶಿಕ್ಷಣ ಇಲಾಖೆ ಒಂದು ವಾರದೊಳಗೆ ಸ್ಪಷ್ಟ ಮಾಹಿತಿ ನೀಡಿ, ಕಾನೂನು ತೊಡಕುಗಳಿಗೆ ಎಡೆ ಮಾಡದೇ ಎಲ್ಲ ಅತಿಥಿ ಉಪನ್ಯಾಸಕರನ್ನು ಆಯ್ಕೆ ಪ್ರಕ್ರಿಯೆಗೆ ಪರಿಗಣಿಸಬೇಕು. ಇಲ್ಲದಿದ್ದರೆ ಕಾನೂನು ಸಚಿವರ ತವರು ಜಿಲ್ಲೆ ಗದಗದಲ್ಲಿ ರಾಜ್ಯದ ಎಲ್ಲ ಅತಿಥಿ ಉಪನ್ಯಾಸಕರು ಅನಿರ್ದಿಷ್ಟಾವಧಿ ಹೋರಾಟ ▸▸3ನೇ ಪುಟಕ್ಕೆ

> ಈಗಾಗಲೇ 10–15 ವರ್ಷಗಳಿಂದ ಸ.ಪ್ರ.ದ ಕಾಲೇಜುಗಳಲ್ಲಿ ಬೋಧನೆ ಮಾಡಿದ ಅನುಭವ ಇರುವ ಮತ್ತು ಶೈಕ್ಷಣಿಕ ಅರ್ಹತೆ ಇಲ್ಲದ ಅನೇಕ ಅತಿಥಿ ಉಪನ್ಯಾಸಕರು ಸರಕಾರದ ಈ ಕ್ರಮದಿಂದ ಅತಂತ್ರರಾಗಿ ಬೀದಿಗೆ ಬರುವ ಪರಿಸ್ಥಿತಿ ನಿರ್ಮಾಣವಾಗಿದೆ. ಸಚಿವರು ಮತ್ತು ಸರಕಾರವು ಅತಿಥಿ ಉಪನ್ಯಾಸಕರ ಪರ ಇದ್ದರೂ ಇಲಾಖೆಯ ಆಯಕಟ್ಟಿನ ಹುದ್ದೆಗಳಲ್ಲಿರುವ ಕೆಲವು ಅಧಿಕಾರಿಗಳು ಸರಕಾರದ ಹಾದಿ ತಪ್ಪಿಸುವ ಮೂಲಕ ಅತಿಥಿ ಉಪನ್ಯಾಸಕರ ಆಯ್ಕೆ ಪ್ರಕ್ರಿಯೆಯಲ್ಲಿ ಪದೇ ಪದೇ ಕಾನೂನು ತೊಡಕು ಉಂಟುಮಾಡುವ ಮೂಲಕ ಅತಿಥಿ ಉಪನ್ಯಾಸಕರ ಬದುಕಿನ ಜೊತೆ ಚೆಲ್ಲಾಟ ಆಡುತ್ತಿದ್ದಾರೆ.

### ತುರ್ತು ಪರಿಸ್ಥಿತಿಯ ಕರಾಳ ದಿನಗಳ ವಿರುದ್ಧ ನಡೆದ ರೋಚಕ ಕಥೆ ಅನಾವರಣ ಕಾರ್ಯಕ್ರಮದಲ್ಲಿ ಸಂಸದ ಬಸವರಾಜ ಬೊಮ್ಮಾಯಿ

# ಅಧಿಕಾರದಲ್ಲಿ ಜನಪರ ಕೆಲಸ ಮಾಡಬೇಕು



■ ವಿಜಯಸಾಕ್ಷಿ ಸುದ್ದಿ, ರಾಣೆಬೆನ್ನೂರು

ರಾಜ್ಯದಲ್ಲಿ ಅಘೋಷಿತ ತುರ್ತು ಪರಿಸ್ಥಿತಿ ಜಾರಿಯಲ್ಲಿದೆ. ಇತಿಹಾಸದಲ್ಲಿ ಯಾವ ರೀತಿ ತುರ್ತು ಪರಿಸ್ಥಿತಿಯ ಕರಾಳ ಅಂತ್ಯವಾಗಿತ್ತೊ, ಅದೇ ರೀತಿ ರಾಜ್ಯ ಕಾಂಗ್ರೆಸ್ ಆಡಳಿತವೂ ಅಂತ್ಯವಾಗುತ್ತದೆ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯಪಟ್ಟರು.

ಶನಿವಾರ ನಗರದ ಶ್ರೀ ನೀಲಕಂಠೇಶ್ವರ ಸಭಾಭವನದಲ್ಲಿ 'ಸಿಟಿಜನ್ಸ್ ಫಾರ್ ಸೋಷಿಯಲ್ ಜಸ್ಟೀಸ್–ರಾಣೆಬೆನ್ನೂರು' ಏರ್ಪಡಿಸಿದ್ದ ತುರ್ತು ಪರಿಸ್ಥಿತಿಯ ಕರಾಳ ದಿನಗಳ ವಿರುದ್ಧ ನಡೆದಿರುವ ರೋಚಕ ಕಥೆ ಅನಾವರಣ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಅಂದಿನ ತುರ್ತು ಪರಿಸ್ಥಿತಿಯ ವಿರುದ್ಧದ ಹೋರಾಟವನ್ನು ನೆನಪಿಸಿಕೊಂಡ ಸಂಸದರು, ನಮಗೆ ರಾಜಕಾರಣ ಗೊತ್ತಿರಲಿಲ್ಲ. ಸ್ವಾತಂತ್ರ್ಯ ಅಂದರೇನು, ಈ ದೇಶಕ್ಕೆ ಸ್ವಾತಂತ್ರ್ಯ ಹೇಗೆ ಬಂದಿದೆ ಎಂಬುದು ಗೊತ್ತಿತ್ತು. ಅದಕ್ಕೆ ಧಕ್ಕೆ ಬಂದಿದೆ ಅಂದಾಗ ನಮ್ಮ ರಕ್ತ ಕುದಿಯುತ್ತಿತ್ತು. ಆ ಸಂದರ್ಭದಲ್ಲಿ ದೇಶಾದ್ಯಂತ ಒಟ್ಟು 6632 ಕೇಸ್‌ಗಳನ್ನು ಹಾಕಿದ್ದರು. 4230 ಕೇಸ್‌ಗಳನ್ನು ಆರ್‌ಎಸ್‌ಎಸ್ ಮೇಲೆ ಹಾಕಲಾಗಿತ್ತು. ಈ ತುರ್ತು ಪರಿಸ್ಥಿತಿಯನ್ನು ತೀವ್ರ ವಿರೋಧ ಮಾಡಿದ್ದು ರಾಷ್ಟ್ರೀಯ ಸ್ವಯಂ ಸೇವಕ ಸಂಘ ಎಂದು ಹೇಳಿದರು.

ಆಗ ಇಂದಿರಾ ಈಸ್ ಇಂಡಿಯಾ, ಇಂಡಿಯಾ ಈಸ್ ಇಂದಿರಾ ಎಂದು ಹೇಳುತ್ತಿದ್ದರು. ಕಾಂಗ್ರೆಸ್‌ನಲ್ಲಿ ಗುಲಾಮಗಿರಿ ಎಷ್ಟು ಆಳವಾಗಿ ಬೇರೂರಿದೆ ಎಂದರೆ, ನಾವು ಭಾರತ ಮಾತಾಕಿ ಜೈ ಎಂದು ಕರೆಯುತ್ತೇವೆ. ಕಾಂಗ್ರೆಸ್‌ನವರು ಸೋನಿಯಾ ಮಾತಾಕಿ ಜೈ ಎನ್ನುತ್ತಾರೆ. ನಮಗೂ ಕಾಂಗ್ರೆಸ್‌ನವರಿಗೂ ▸▸3ನೇ ಪುಟಕ್ಕೆ

> ರಾಜ್ಯದಲ್ಲಿ ಅಘೋಷಿತ ತುರ್ತು ಪರಿಸ್ಥಿತಿ ಇದೆ. ಯಾರಾದರೂ ಕೋಮುವಾದಿ ರೀತಿ ಭಾಷಣ ಮಾಡಿದರೆ ಸ್ವಯಂ ಪ್ರೇರಿತವಾಗಿ ಪ್ರಕರಣ ದಾಖಲಿಸಲಾಗುವದು ಎಂದು ಹೇಳಿದ್ದಾರೆ. ಕರ್ನಾಟಕವನ್ನು ಪೊಲೀಸ್ ರಾಜ್ಯ ಮಾಡಲು ಹೊರಟಿದ್ದರೆ ಅದು ಸಾಧ್ಯವಿಲ್ಲ. ಯಾವಾಗ ರಾಜಶಕ್ತಿ ಮತ್ತು ಪ್ರಜಾಶಕ್ತಿ ನಡುವೆ ಸಂಘರ್ಷವಾಗುತ್ತದೆಯೋ ಆಗ ಪ್ರಜಾಪ್ರಭುತ್ವಕ್ಕೆ ಜಯವಾಗಿದೆ. ಇತಿಹಾಸದಲ್ಲಿ ಯಾವ ರೀತಿ ತುರ್ತು ಪರಿಸ್ಥಿತಿ ಕರಾಳವಾಗಿ ಅಂತ್ಯವಾಗಿತ್ತೋ ಅದೇ ರೀತಿ ನಿಮ್ಮ ಆಡಳಿತವೂ ಅಂತ್ಯವಾಗುತ್ತದೆ. ಅಧಿಕಾರದಲ್ಲಿ ಜನಪರ ಕೆಲಸ ಮಾಡಬೇಕು, ಏಕಪಕ್ಷೀಯವಾದ ತುಷ್ಟೀಕರಣದ ರಾಜಕಾರಣ ಅಲ್ಲ ಎಂದು ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು.

### ಕೆಎಸ್‌ಎಂಸಿಎ ಸ್ಥಳಾಂತರಿತ ಮಂಗಳೂರು ಶಾಖೆಯನ್ನು ಉದ್ಘಾಟಿಸಿದ ಅಧ್ಯಕ್ಷ ಸತೀಶ್ ಸೈಲ್

# ವಿವಿಧ ಇಲಾಖೆಗಳಿಂದ 106 ಕೋಟಿ ರೂ ಬಾಕಿ

■ ವಿಜಯಸಾಕ್ಷಿ ಸುದ್ದಿ, ಮಂಗಳೂರು

ಲೋಕೋಪಯೋಗಿ, ನಗರ ಪಾಲಿಕೆ ಸೇರಿದಂತೆ ಸರ್ಕಾರದ ವಿವಿಧ ಇಲಾಖೆಗಳಿಂದ ಜಾಹೀರಾತು ಬಾಬ್ತು 106 ಕೋಟಿ ರೂ.ಗೂಅಧಿಕ ಮೊತ್ತ ಬರಬೇಕಾಗಿದೆ ಎಂದು ಕರ್ನಾಟಕ ರಾಜ್ಯ ಮಾರ್ಕೆಟಿಂಗ್ ಕಮ್ಯುನಿಕೇಷನ್ ಅಂಡ್ ಅಡ್ವರ್ಟೈಸಿಂಗ್ ಲಿಮಿಟೆಡ್ (ಕೆಎಸ್‌ಎಂಸಿಎ) ನಿಗಮದ ಅಧ್ಯಕ್ಷ, ಕಾರವಾರ ಶಾಸಕ ಸತೀಶ್ ಸೈಲ್ ಹೇಳಿದ್ದಾರೆ.

ಅವರು ಮಂಗಳೂರಿನ ಯೆಯ್ಯಾಡಿಯಲ್ಲಿ ಕೆಎಸ್‌ಎಂಸಿಎ ಸ್ಥಳಾಂತರಿತ ಮಂಗಳೂರು ಶಾಖೆಯ ಉದ್ಘಾಟನೆ ನೆರವೇರಿಸಿ ಬಳಿಕ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು.

ಇಂಡಿಯನ್ ನ್ಯೂಸ್ ಪೇಪರ್ ಸೊಸೈಟಿ (ಐಎನ್‌ಎಸ್) ನಿಯಮದ ಪ್ರಕಾರ ಸರ್ಕಾರಿ ಜಾಹೀರಾತುಗಳನ್ನು ಪತ್ರಿಕೆಗಳಿಗೆ ನೀಡಿದ 60 ದಿನಗಳಲ್ಲಿ ಕೆಎಸ್‌ಎಂಸಿಎ ಬಿಲ್ ಪಾವತಿಸುತ್ತದೆ. ಆದರೆ ಕೆಎಸ್‌ಎಂಸಿಎ ಬಳಿಕ ಅದನ್ನು ಸರ್ಕಾರದಿಂದ ಪಡೆಯುವುದು ಕ್ರಮ. 2022ರಿಂದ ವಸೂಲಿಗೆ ಬಾಕಿ ಮೊತ್ತ ಇರುವ ಬಗ್ಗೆ ಸರ್ಕಾರದ ಗಮನಕ್ಕೆ ತರಲಾಗಿದೆ. ಇಲ್ಲಿಯವರೆಗೆ 106 ಕೋಟಿ ರೂ.ಗೂ ಅಧಿಕ ಮೊತ್ತ ಬರಬೇಕಾಗಿದೆ. ಮೊತ್ತ ಬಾಕಿ ಇರಿಸಿರುವ ಇಲಾಖೆಗಳಿಂದ ಪಾವತಿಗೆ ಕ್ರಮ ಕೈಗೊಳ್ಳುವಂತೆ ಕೋರಿ ಜಿಲ್ಲಾಧಿಕಾರಿಗಳು, ಸಹಾಯಕ ಕಮಿಷನರ್‌ಗಳಿಗೆ ಪತ್ರದ ಮೂಲಕ ಕೋರಲಾಗಿದೆ ಎಂದರು.

ಮಾಧ್ಯಮಗಳಿಗೆ ಸರ್ಕಾರದ ಇಲಾಖೆಗಳು ನೀಡುವ ಜಾಹೀರಾತು ಮೊತ್ತದಲ್ಲಿ ಶೇ.15ರಷ್ಟು ಕಮಿಷನ್‌ನ್ನು ಕೆಎಸ್‌ಎಂಸಿಎ ಪಡೆದುಕೊಳ್ಳುತ್ತದೆ. ಪತ್ರಿಕೆಗಳಿಗೆ ಪ್ರಯೋಜನವಾಗುವ ಸಲುವಾಗಿ ಈ ಕಮಿಷನ್ (ಏಜೆಂಟ್ ಚಾರ್ಜ್) ಮೊತ್ತವನ್ನು ಶೇ.10ಕ್ಕೆ ಇಳಿಸುವ ಬಗ್ಗೆ ಚಿಂತಿಸಲಾಗುತ್ತಿದೆ ಎಂದರು. ಜಾಹೀರಾತು ಮತ್ತು ಈವೆಂಟ್‌ಗಳನ್ನು ಕೆಎಸ್‌ಎಂಸಿಎ ಆಯೋಜಿಸುತ್ತಿದೆ. ಈವೆಂಟ್ ಆಯೋಜನೆಯಲ್ಲಿ 4ಜಿ ವಿನಾಯ್ತಿಯನ್ನು 25 ಲಕ್ಷ ರೂ.ನಿಂದ 200 ಲಕ್ಷ ರೂ.ಗೆ ವಿಸ್ತರಿಸಲಾಗಿದೆ. ವಿವಿಧ ಸ್ಟಾರ್ಟ್‌ಅಪ್‌ಗಳ ವೃತ್ತಿಪರರ ಜೊತೆ ಹಾಗೂ ವಿವಿಧ ಕಂಪನಿಗಳು, ಎಂಎಸ್‌ಎಂಇ, ಬ್ಯಾಂಕ್‌ಗಳು, ಪಿಎಸ್‌ಯುಗಳು, ಗ್ರಾಹಕರೊಂದಿಗೆ ಚರ್ಚಿಸಲಾಗುತ್ತಿದೆ. ಇವುಗಳ ಜೊತೆ ಸಂಪರ್ಕ ಸೇತುವೆಯಾಗಿ ಹಾಗೂ ತಂತ್ರಜ್ಞಾನ ಫ್ಲಾಟ್‌ಫಾರಂ ಆಗಿ ಕೆಎಸ್‌ಎಂಸಿಎ ವೇದಿಕೆ ಒದಗಿಸುತ್ತದೆ ಎಂದರು.

ಸಂಸ್ಥೆಗೆ ವಿವಿಧ ಜಿಲ್ಲೆಗಳಲ್ಲಿ ಹಂಚಿಕೆ, ನೋಂದಣಿಯಾಗಿರುವ 12 ನಿವೇಶನಗಳಲ್ಲಿ ಕೆಎಸ್‌ಎಂಸಿಎ ಭವನ ನಿರ್ಮಾಣ ಮಾಡಲು ಉದ್ದೇಶಿಸಲಾಗಿದೆ. ಈ ಸಂಸ್ಥೆಗೆ ಕೆಐಎಡಿಬಿಯಿಂದ ಬೆಂಗಳೂರಿನಲ್ಲಿ ಹಂಚಿಕೆಯಾಗಿರುವ 1 ಎಕರೆ ಕೈಗಾರಿಕಾ ಭೂಮಿಲ್ಲಿ ಮುದ್ರಣ ಮತ್ತು ಐಟಿ–ಐಟಿಇಎಸ್ ಚಟುವಟಿಕೆಯ ಕಾರ್ಯಯೋಜನೆ ಸಿದ್ಧಪಡಿಸಲಾಗುತ್ತಿದೆ ಎಂದರು. ಸಂಸ್ಥೆಯಎಂಡಿ ಮೊಹಮ್ಮದ್‌ಅತಿಕುಲ್ಲಾ ಶರೀಫ್, ಡಿಜಿಎಂ ನಂದೀಶ್, ಶಾಖಾ ಪ್ರಬಂಧಕ ರಾಘವೇಂದ್ರ ಶಾಸ್ತ್ರಿ, ವಿಶೇಷ ಅಧಿಕಾರಿ ಅನುರಾಧ ಇದ್ದರು.



> ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆಯ ಅಧೀನದಲ್ಲಿ 1972ರಲ್ಲಿ ಕೆಎಸ್‌ಎಂಸಿಎ ಅಸ್ತಿತ್ವಕ್ಕೆ ಬಂದಿದ್ದು, ಕಳೆದ ಸಾಲಿನಲ್ಲಿ 17 ಕೋಟಿ ರೂ ಲಾಭ ಗಳಿಸಿದೆ. ಮುಖ್ಯಮಂತ್ರಿಗಳ ಪರಿಹಾರ ನಿಧಿಗೆ ವಾರ್ಷಿಕ ತಲಾ 1 ಕೋಟಿ ರೂ. ದೇಣಿಗೆ ನೀಡಿದೆ. ಪ್ರಸಕ್ತ ಸಾಲಿನಲ್ಲಿ ಕಂಪನಿಯ ಲಾಭದಲ್ಲಿ 5.28 ಕೋಟಿ ರೂ.ಗಳ ಲಾಭಾಂಶವನ್ನು ಸರ್ಕಾರಕ್ಕೆ ಸಂದಾಯ ಮಾಡಲಾಗಿದೆ ಎಂದು ಶಾಸಕ ಸತೀಶ್ ಸೈಲ್ ವಿವರಿಸಿದರು.

## ಸಂಪಾದಕೀಯ

# ದುಬಾರಿಯಾದ ಆಟೋ ಪ್ರಯಾಣ: ನಿಯಂತ್ರಣ ಕ್ರಮಗಳು ಅಗತ್ಯ

ನಗರಗಳಲ್ಲಿ ಆಟೋ ರಿಕ್ಷಾ ಚಾಲಕರು ನಿಗದಿತ ದರಕ್ಕಿಂತ ಹೆಚ್ಚು ವಸೂಲಿ ಮಾಡುತ್ತಿರುವುದು ಮತ್ತು ಬಾಡಿಗೆಗೆ ಬರಲು ನಿರಾಕರಿಸುವುದು ನಿರಂತರ ಸಮಸ್ಯೆಯಾಗಿದೆ. ಸಾರಿಗೆ ಸಚಿವರ ಕಟ್ಟುನಿಟ್ಟಿನ ಸೂಚನೆಗಳ ಹೊರತಾಗಿಯೂ, ಆ್ಯಪ್ ಆಧಾರಿತ ಸೇವೆಗಳಲ್ಲಿಯೂ (ಓಲಾ, ಊಬರ್, ರ‍್ಯಾಪಿಡೋ) ಪ್ರತಿ ಕಿಲೋಮೀಟರ್‌ಗೆ ನೂರು ರೂಪಾಯಿಗಳಿಗಿಂತಲೂ ಹೆಚ್ಚು ದರ ವಿಧಿಸಿರುವುದು ನಿಜಕ್ಕೂ ಆತಂಕಕಾರಿ.

ಇದು ಹಗಲು ದರೋಡೆಯಲ್ಲದೆ ಮತ್ತೇನೂ ಅಲ್ಲ. ಇಂತಹ ದೂರುಗಳು ನಿರಂತರವಾಗಿ ಬರುತ್ತಿದ್ದರೂ, ಅಧಿಕಾರಿಗಳು ಕಠಿಣ ಕ್ರಮಗಳನ್ನು ತೆಗೆದುಕೊಂಡರೂ ಸಂಪೂರ್ಣ ಕಡಿವಾಣ ಬಿದ್ದಿಲ್ಲದಿರುವುದು ವ್ಯವಸ್ಥೆಯ ದುರ್ಬಲತೆಯನ್ನು ಎತ್ತಿ ತೋರಿಸುತ್ತದೆ.

ನಗರ ಪ್ರದೇಶಗಳಲ್ಲಿ ಆಟೋಗಳು ಸುಲಭವಾಗಿ ಸಿಗುತ್ತಾರಾದರೂ, ಪ್ರಯಾಣಿಕರು ದರಕ್ಕಾಗಿ ನಡೆಸುವ ಚೌಕಾಸಿ ಮತ್ತು ಚಾಲಕರ ಅನಗತ್ಯ ಬೇಡಿಕೆಗಳಿಂದ ಬೇಸತ್ತಿದ್ದಾರೆ.

ಆದರೆ, ಈ ಸಮಸ್ಯೆ ಕೇವಲ ನಗರಗಳಿಗೆ ಸೀಮಿತವಾಗಿಲ್ಲ.

ಗ್ರಾಮೀಣ ಭಾಗದಲ್ಲಿ ಆಟೋ ಸೇವೆಗಳು ಬಲು ವಿರಳ. ಇರುವ ಅಲ್ಪ ಆಟೋ ಚಾಲಕರು ಹೆಚ್ಚಿನ ದರವನ್ನು ಕೇಳುತ್ತಿದ್ದಾರೆ. ಅಲ್ಲಿ ಪ್ರಯಾಣಿಕರಿಗೆ ಬೇರೆ ಪರ್ಯಾಯಗಳಿಲ್ಲದ ಕಾರಣ, ಅನಿವಾರ್ಯವಾಗಿ ಅಧಿಕ ದರ ತೆರಬೇಕಾಗುತ್ತದೆ. ಸಾರಿಗೆ ಸಂಪರ್ಕ ಕಡಿತಗೊಂಡಿರುವ ಪ್ರದೇಶಗಳಲ್ಲಿ ಆಟೋಗಳ ಪಾತ್ರ ನಿರ್ಣಾಯಕವಾಗಿದ್ದರೂ, ಅಲ್ಲಿನ ಜನರನ್ನು ಆರ್ಥಿಕವಾಗಿ ಶೋಷಿಸಲಾಗುತ್ತಿದೆ. ನಗರದಲ್ಲಿ ಆ್ಯಪ್ ಆಧಾರಿತ ಸೇವೆಗಳು ಪೈಪೋಟಿ ನೀಡಿದರೂ, ದರಗಳು ನಿಯಂತ್ರಣಕ್ಕೆ ಬರುತ್ತಿಲ್ಲ. ಗ್ರಾಮೀಣ ಪ್ರದೇಶಗಳಲ್ಲಿ ಆ ಪೈಪೋಟಿಯೂ ಇಲ್ಲ.

ಸರ್ಕಾರ ನಗರ ಮತ್ತು ಗ್ರಾಮೀಣ ಎರಡೂ ಪ್ರದೇಶಗಳಲ್ಲಿ ಆಟೋ ಸೇವೆಗಳನ್ನು ನಿಯಂತ್ರಿಸಲು ಸಮಗ್ರ ನೀತಿಯನ್ನು ರೂಪಿಸಬೇಕು. ನಗರಗಳಲ್ಲಿ ದರ ನಿಯಂತ್ರಣ ಮತ್ತು ಕಟ್ಟುನಿಟ್ಟಿನ ಮೇಲ್ವಿಚಾರಣೆ ಅಗತ್ಯ. ಹೆಚ್ಚುವರಿ ದರ ವಸೂಲಿ ಮಾಡುವವರ ಪರವಾನಗಿಯನ್ನು ರದ್ದುಪಡಿಸುವುದು, ದಂಡ ವಿಧಿಸುವುದು ಮತ್ತು ಕ್ರಿಮಿನಲ್ ಪ್ರಕರಣ ದಾಖಲಿಸುವಂತಹ ಕಠಿಣ ಕ್ರಮಗಳನ್ನು ಇನ್ನಷ್ಟು ಪರಿಣಾಮಕಾರಿಯಾಗಿ ಜಾರಿಗೊಳಿಸಬೇಕು.

ಗ್ರಾಮೀಣ ಭಾಗದಲ್ಲಿ ಆಟೋ ಸೇವೆಗಳ ಲಭ್ಯತೆಯನ್ನು ಹೆಚ್ಚಿಸಬೇಕು ಮತ್ತು ಅಲ್ಲಿಯೂ ನ್ಯಾಯಯುತ ದರ ನಿಗದಿಪಡಿಸಬೇಕು. ಇ-ರಿಕ್ಷಾಗಳು ಅಥವಾ ಸಮುದಾಯ ಆಧಾರಿತ ಆಟೋ ಸೇವೆಗಳನ್ನು ಉತ್ತೇಜಿಸುವ ಮೂಲಕ ಗ್ರಾಮೀಣ ಸಾರಿಗೆಯನ್ನು ಸುಧಾರಿಸಬಹುದು. ಆಟೋ ಚಾಲಕರು ಮತ್ತು ಪ್ರಯಾಣಿಕರ ನಡುವೆ ಉತ್ತಮ ಸಂಬಂಧವನ್ನು ಬೆಳೆಸಲು ಜಾಗೃತಿ ಕಾರ್ಯಕ್ರಮಗಳೂ ಅಗತ್ಯ. ಇಂತಹ ಸಮಗ್ರ ವಿಧಾನದಿಂದ ಮಾತ್ರ ನಗರ ಮತ್ತು ಗ್ರಾಮೀಣ ಭಾಗದ ಪ್ರಯಾಣಿಕರಿಗೆ ನ್ಯಾಯಯುತ ಮತ್ತು ವಿಶ್ವಾಸನೀಯ ಆಟೋ ಸೇವೆ ದೊರೆಯಲು ಸಾಧ್ಯ.

# ಲೆಬನಾನ್ ಮೇಲೆ ಇಸ್ರೇಲ್ ವಾಯುದಾಳಿ: 1 ಸಾವು, 11 ಮಂದಿಗೆ ಗಾಯ

■ ವಿಜಯಸಾಕ್ಷಿ ಸುದ್ದಿ, ನಬಾಟಿಯೆಹ್

ಶುಕ್ರವಾರ ಇಸ್ರೇಲ್‌ನ ವಾಯುಪಡೆಯು ಲೆಬನಾನ್‌ನ ದಕ್ಷಿಣ ಭಾಗದಲ್ಲಿರುವ ಪರ್ವತಗಳ ಮೇಲೆ ಭಾರಿ ವೈಮಾನಿಕ ದಾಳಿಗಳನ್ನು ನಡೆಸಿದೆ.

ಈ ದಾಳಿಗಳು ಹಿಜ್ಬುಲ್ಲಾ ಗುಂಪಿನ ಭೂಗತ ನೆಲೆಗಳನ್ನು ಗುರಿಯಾಗಿಸಿಕೊಂಡಿದ್ದವು ಎಂದು ಇಸ್ರೇಲಿ ಸೇನೆ ಹೇಳಿದೆ.

ಈ ದಾಳಿಯ ನಂತರ, ನಬಾಟಿಯೆಹ್ ನಗರದ ಸಮೀಪದ ಅಪಾರ್ಟ್‌ಮೆಂಟ್ ಕಟ್ಟಡವೊಂದಕ್ಕೆ ಹಾನಿಯಾಗಿದೆ. ಈ ದಾಳಿಯಲ್ಲಿ ಒಬ್ಬ ಮಹಿಳೆ ಸಾವನ್ನಪ್ಪಿದ್ದು, 11 ಜನರು ಗಾಯಗೊಂಡಿದ್ದಾರೆ. ಕಟ್ಟಡದ ಮೇಲಿನ ಮಹಡಿ ಸಂಪೂರ್ಣವಾಗಿ ನಾಶವಾಗಿದೆ ಎಂದು ಲೆಬನಾನ್‌ನ ಸರ್ಕಾರಿ ಸುದ್ದಿ ಸಂಸ್ಥೆ ತಿಳಿಸಿದೆ. ಸಾವನ್ನಪ್ಪಿದ ಮಹಿಳೆಯು ಜರ್ಮನಿಯಲ್ಲಿ ವಾಸಿಸುತ್ತಿದ್ದರು. ಅವರು ಕೇವಲ ಒಂದು ತಿಂಗಳ ಹಿಂದೆಯಷ್ಟೇ ಕುಟುಂಬವನ್ನು ಭೇಟಿ ಮಾಡಲು ಲೆಬನಾನ್‌ಗೆ ಮರಳಿದ್ದರು ಎಂದು ಸರ್ಕಾರಿ ಸ್ವಾಮ್ಯದ ರಾಷ್ಟ್ರೀಯ ಸುದ್ದಿ ಸಂಸ್ಥೆ (ಓಓಂ) ತಿಳಿಸಿದೆ. ಅವರು ಜರ್ಮನ್ ಪ್ರಜೆಯಾಗಿದ್ದಾರೆಯೇ ಎಂಬುದು ತಕ್ಷಣಕ್ಕೆ ಸ್ಪಷ್ಟವಾಗಿಲ್ಲ. ಮಹಿಳೆಯ ಇದ್ದ ಅಪಾರ್ಟ್‌ಮೆಂಟ್ ಇಸ್ರೇಲಿ ಡ್ರೋನ್ ದಾಳಿಗೆ ತುತ್ತಾಗಿದೆ ಎಂದು ವರದಿ ಹೇಳಿದೆ. ಇಸ್ರೇಲಿ ಸೇನೆಯು 'ಎಕ್ಸ್' (ಹಿಂದಿನ ಟ್ವಿಟರ್) ನಲ್ಲಿ ಹೇಳಿಕೆ ಬಿಡುಗಡೆ ಮಾಡಿದ್ದು, ತಾವು ನಾಗರಿಕ ಕಟ್ಟಡವನ್ನು ಗುರಿಯಾಗಿಸಿದ್ದನ್ನು ನಿರಾಕರಿಸಿದೆ. ಬದಲಾಗಿ, ವಾಯುದಾಳಿಗೆ ಒಳಗಾದ ಸ್ಥಳದಲ್ಲಿ ಹಿಜ್ಬುಲ್ಲಾ ರಾಕೆಟ್‌ಗಳನ್ನು ಸಂಗ್ರಹಿಸಿಟ್ಟಿತ್ತು. ಇವು ಸ್ಫೋಟಗೊಂಡ ಕಾರಣ ಕಟ್ಟಡಕ್ಕೆ ಹಾನಿಯಾಗಿದೆ ಎಂದು ಸೇನೆ ಹೇಳಿದೆ. ವಸತಿ ಪ್ರದೇಶಗಳ ಬಳಿ ಶಸ್ತ್ರಾಸ್ತ್ರಗಳನ್ನು ಸಂಗ್ರಹಿಸಿದ್ದಕ್ಕಾಗಿ ಹಿಜ್ಬುಲ್ಲಾವನ್ನೇ ದೂಷಿಸಿದೆ.

## ವಿಧಾನಪರಿಷತ್‌ನ ಸದಸ್ಯರಾಗಿ 45 ವರ್ಷ ಪೂರ್ಣಗೊಳಿಸಿದ ಬಸವರಾಜ ಹೊರಟ್ಟಿ

# ಅಪರೂಪದ ಸಾಧಕನ ಯಶೋಗಾಥೆ



ಒಬ್ಬ ಸಾಮಾನ್ಯ ಶಿಕ್ಷಕ ಅಸಾಮಾನ್ಯವಾಗಿ ಬೆಳೆದು 5 ದಶಕಗಳ ಸಾರ್ವಜನಿಕ ಬದುಕಿನಲ್ಲಿ ಶತಮಾನದ ಸಾಧನೆಗೈದು ಸತತ 45 ವರ್ಷಗಳ ಕಾಲ ವಿಧಾನ ಪರಿಷತ್ ಸದಸ್ಯರಾಗಿ ತಮ್ಮ ಸಂಸದೀಯ ಪಯಣವನ್ನು ಪೂರ್ಣಗೊಳಿಸಿದ ಬಸವರಾಜ ಹೊರಟ್ಟಿ ದಾಖಲೆಯನ್ನು ಹಿಂದೆಯೂ ಯಾರೂ ಮಾಡಿಲ್ಲ, ಮುಂದೆಯೂ ಯಾರೂ ಮಾಡಲಾರರು.

1980 ಜೂನ್ 30 ರಂದು ಪ್ರಪ್ರಥಮ ಬಾರಿಗೆ ವಿಧಾನಪರಿಷತ್ ಸದಸ್ಯರಾಗಿ ಬಸವರಾಜ ಹೊರಟ್ಟಿಯವರು ಪ್ರಮಾಣವಚನ ಸ್ವೀಕರಿಸಿ ತಮ್ಮ ಸಂಸದೀಯ ಪಯಣವನ್ನು ಆರಂಭಿಸಿದರು. ಆಯುಷ್ಯದ ಅರ್ಧ ಶತಮಾನವನ್ನೇ ವಿಧಾನ ಪರಿಷತ್ತಿನಲ್ಲಿ ಕಳೆಯುವ ಮೂಲಕ ಶಿಕ್ಷಕರ ಹಾಗೂ ಸಾರ್ವಜನಿಕ ಧ್ವನಿಯಾದ ಬಸವರಾಜ ಹೊರಟ್ಟಿಯವರು ಶಿಕ್ಷಕರ ಸಮೂಹದ ಆಸ್ತಿ. ಸದಾಕಾಲ ಶಿಕ್ಷಕರ ಹಾಗೂ ಸಾರ್ವಜನಿಕರ ನೋವು-ದುಗುಡಗಳಿಗೆ ಕಿವಿಯಾದವರು. ಶಿಕ್ಷಕರೊಬ್ಬರು ಶಾಸಕರಾಗಿ, ಸಚಿವರಾಗಿ, ಮೂರನೆಯ ಭಾರಿ ಸಭಾಪತಿಯಾಗಿ ಸೇವೆ ಸಲ್ಲಿಸುತ್ತಿರುವ ಸೌಭಾಗ್ಯ ರಾಜಕೀಯ ಇತಿಹಾಸದಲ್ಲಿ ಬೆರಳೆಣಿಕೆಯಷ್ಟು ಜನರಿಗೆ ಸಿಗುತ್ತದೆ. ಅಂತಹ ಅವಕಾಶ ದೇಶದ ಇತಿಹಾಸದಲ್ಲೇ ಹೊರಟ್ಟಿಯವರಿಗೆ ಸಿಕ್ಕಿದ್ದು ಅವರ ಹಿತೈಷಿಗಳಿಗೆ ಹೆಮ್ಮೆಯ ಸಂಗತಿ.

ಬರೆಯುವಂತೆ ಬದುಕುತ್ತಿರುವ ಬಸವರಾಜ ಹೊರಟ್ಟಿಯವರ 45 ವರ್ಷಗಳ ಸಂಸದೀಯ ಪಯಣದ ಯಶೋಗಾಥೆ ರೋಚಕ ಹಾಗೂ ರೋಮಾಂಚಕ. ಇಂದು ಉದ್ಯಮವಾಗಿರುವ ರಾಜಕೀಯ ಕ್ಷೇತ್ರದಲ್ಲಿ ಶುದ್ಧಹಸ್ತರಾಗಿ ರಾಜಕಾರಣ ಮಾಡುವುದೆಂದರೆ ದಿನವೂ ಅಗ್ನಿ ದಿವ್ಯಗಳನ್ನು ಹಾಯುವ, ನೋವು-ಸಂಕಟಗಳನ್ನು ಜೀರ್ಣಿಸಿಕೊಳ್ಳುವ ನೈತಿಕ ಶಕ್ತಿ ರಾಜಕಾರಣಿಗಳಿಗೆ ಇರಬೇಕಾಗುತ್ತದೆ. ಅಂತಹ ನೈತಿಕ ಶಕ್ತಿಯ ಪ್ರತೀಕವೆಂಬಂತೆ ಬಸವರಾಜ ಹೊರಟ್ಟಿಯವರು ಕಾಣಿಸುತ್ತಿದ್ದಾರೆ.

ಹೊರಟ್ಟಿಯವರನ್ನು ಸಮೀಪದಿಂದ ಕಂಡವರಿಗೆ ಮಾತ್ರ ಅವರಲ್ಲೊಬ್ಬ ಅಪ್ಪಟ ಮನುಷ್ಯ ಕಾಣಿಸುತ್ತಾರೆ. ಅಧಿಕಾರದ ಮದವಾಗಲಿ, ಜನಪ್ರೀಯತೆಯ ಭ್ರಮೆಯಾಗಲಿ ಅವರನ್ನು ಕಾಡಿಲ್ಲ. ಜಾತಿ, ಕುಲ, ಗೋತ್ರದ ಕೆಸರನ್ನು ಎಳೆಸುವವರ ಮಧ್ಯದಲ್ಲಿಯೂ ತಾವು ನಂಬಿದ ಮೌಲ್ಯಗಳಿಗೆ ತಕ್ಕ ಹಾಗೆ ಬದುಕುವ ಬಹುದೊಡ್ಡ ಆಶಯವನ್ನು ತಮ್ಮ ನಡೆ-ನುಡಿಗಳಲ್ಲಿ ಗಟ್ಟಿಯಾಗಿ ಉಳಿಸಿಕೊಂಡಿರುವ ಅಪರೂಪದ ರಾಜ-ಕಾರಣಿಯಾಗಿದ್ದಾರೆ. ಜಾತಿ ಹಚ್ಚಿಕೊಂಡು ಹುಟ್ಟಿದರೂ ಎಂದೂ ಮತ ಮತ್ತು ಮತೀಯ ರಾಜಕಾರಣ ಮಾಡದೆ ಇದ್ದ ಅಪರೂಪದ ರಾಜಕಾರಣಿ.

ಕಳೆದ ಶತಮಾನದ 80ರ ದಶಕವು ಕರ್ನಾಟಕದ ಪಾಲಿಗೆ ಹಲವು ರಾಜಕಾರಣಗಳಿಂದ ಮನ್ವಂತರದ ಕಾಲವೆಂದು ಕರೆಯಿಸಿಕೊಳ್ಳುತ್ತಿದೆ. ಈ ಕಾಲದಲ್ಲಿ ರಾಜಕೀಯ ರಂಗ ಪ್ರವೇಶಿಸಿದ ಹೊರಟ್ಟಿಯವರು ಸೋಲಿಲ್ಲದೆ ನಿರಂತರವಾಗಿ 8 ಸಲ ಗೆಲ್ಲುತ್ತಿರುವುದಕ್ಕೆ ಪಕ್ಷ ಕಾರಣವೆಂದು ಹೇಳುವದು ಅಸತ್ಯವಾದೀತು. ವೈಯಕ್ತಿಕ ವ್ಯಕ್ತಿತ್ವದ ಕಾರಣದಿಂದ ಸೋಲನ್ನು ಮಣಿಸಿ ನಿರಂತರ ಗೆಲುವಿನೊಂದಿಗೆ ಅವರು ದಿಟ್ಟಹೆಜ್ಜೆಗಳನ್ನು ಹಾಕುತ್ತಿದ್ದಾರೆಂಬುದು ಕನ್ನಡಿಗರ ಪ್ರಾಮಾಣಿಕ ಅಭಿಪ್ರಾಯ. ಅಲ್ಲದೇ ತಾವು ನಂಬಿದ ಶಿಕ್ಷಕರ ಸಮೂಹ ಹೊರಟ್ಟಿಯವರ ಬಳಿ ಎಂದೂ ಸೋಲನ್ನು ಸುಳಿಯದಂತೆ ನೋಡಿಕೊಂಡಿರುವದು ಶಿಕ್ಷಕ ಮತ್ತು ಹೊರಟ್ಟಿಯವರ ಅವಿನಾಭಾವ ಸಂಬಂಧ ಎಷ್ಟು ಗಟ್ಟಿ ಎನ್ನುವುದಕ್ಕೆ ಅವರ ಸತತ ಗೆಲುವೇ ಸಾಕ್ಷಿ.

ಒಬ್ಬ ಸಾಮಾನ್ಯ ಪ್ರಾಥಮಿಕ ಶಾಲಾ ಶಿಕ್ಷಕರ ಮಗನಾಗಿ, ಸ್ವತಃ ಶಿಕ್ಷಕರಾಗಿ, ಶಿಕ್ಷಕ ಸಮೂಹದ ಪ್ರತಿನಿಧಿಗಳಾಗಿ ವಿಧಾನ ಪರಿಷತ್ ಪ್ರವೇಶಿಸಿ, ಸಚಿವರಾಗಿ, ಮೂರು ಬಾರಿ ಸಭಾಪತಿಗಳಾಗಿ ಆಯ್ಕೆಗೊಂಡು ಒಂದೇ ಕ್ಷೇತ್ರದಿಂದ ಸತತವಾಗಿ ಎಂಟು ಸಲ ಗೆದ್ದು ವಿಶ್ವ ದಾಖಲೆಯೊಂದಿಗೆ ಗಿನ್ನಿಸ್ ರೆಕಾರ್ಡ್ ಹಾಗೂ ಲಿಮ್ಕಾ ವರ್ಲ್ಡ್ ಬುಕ್ ಆಫ್ ರೆಕಾರ್ಡ್ಸ್‌ನಲ್ಲಿ ಇವರ ಸಾಧನೆ ದಾಖಲೆಯಾಗಿದೆ. ತಮ್ಮ ಜನಪರ ನಿಲುವುಗಳೊಂದಿಗೆ ಜನಮಾನಸದಲ್ಲಿ ರಾಜಕೀಯ ಕ್ಷೇತ್ರದ ದಂತ ಕಥೆಯಾಗಿರುವ ಬಸವರಾಜ ಹೊರಟ್ಟಿಯವರು ಮುಂದಿನ ಪೀಳಿಗೆಗೆ ಮಾದರಿ ರಾಜಕಾರಣಿಯಾಗಿದ್ದಾರೆ.

ತಮ್ಮ 5 ದಶಕಗಳ ಸಾರ್ವಜನಿಕರ ಬದುಕಿನಲ್ಲಿ ಒಂದೇ ಒಂದು ಕಳಂಕವನ್ನು ಮೈಗೆ ಅಂಟಿಸಿಕೊಳ್ಳದೆ ಬದುಕಿದವರು. ತಮ್ಮ ನೇರ ನಡೆ-ನುಡಿಯ ಮೂಲಕ ಕರ್ನಾಟಕದ ರಾಜಕಾರಣದಲ್ಲಿ ತಮ್ಮದೇ ಆದ ಛಾಪನ್ನ, ಗತ್ತನ್ನ ಮೂಡಿಸಿದವರು. ವಿಶೇಷವಾಗಿ ಉತ್ತರ ಕರ್ನಾಟಕದ ಅಭಿವೃದ್ಧಿಯ ವಿಷಯ ಬಂದಾಗಂತೂ ಅಂಕಿ-ಸಂಖ್ಯೆಗಳ ಸಮೇತ ಸರ್ಕಾರದ ಕಣ್ಣು ತೆರೆಸಿ, ಆದ ತಾರತಮ್ಯದ ಕುರಿತು ಎಚ್ಚರಿಸಿದವರು. ಇಂದಿಗೂ ತಮ್ಮ ಹುಟ್ಟೂರಿನ ಸಂಬಂಧವನ್ನಿಟ್ಟುಕೊಂಡು ಹುಟ್ಟೂರಿನ ಋಣ ತೀರಿಸುವ ಮೂಲಕ ಒಬ್ಬ ಮಾದರಿ ರಾಜಕಾರಣಿಯಾದವರು.

ಇಂತಹ ಮಹಾನ್ ಸಾಧಕ ಬಸವರಾಜ ಹೊರಟ್ಟಿಯವರು 1980ರಿಂದ 2025ರವರೆಗೆ ಸತತ 45 ವರ್ಷಗಳ ಕಾಲ ವಿಧಾನ ಪರಿಷತ್ತಿನಲ್ಲಿ ತಮ್ಮದೇ ಆದ ಸಾರ್ಥಕ ಸೇವೆಯನ್ನು ಸಲ್ಲಿಸುತ್ತಾ ಬಂದಿದ್ದಾರೆ. ಅಲ್ಲದೇ 43 ವರ್ಷಗಳಿಂದ ಶಾಸಕರ ಭವನದ 'ರೂಮ್ ನಂಬರ್-465'ರಲ್ಲಿ ವಾಸವಾಗಿರುವುದು ಇನ್ನೊಂದು ವಿಶೇಷ. ವಿಧಾನ ಪರಿಷತ್ ಸದಸ್ಯರಾಗಿ 45 ವರ್ಷ ಪೂರ್ಣಗೊಳಿಸಿದ ಈ ಶುಭ ಸಂದರ್ಭದಲ್ಲಿ ಮೇರು ಸಾಧಕನ ಸಾಧನೆಗೆ ನಾವು-ನೀವೆಲ್ಲ ಶುಭ ಹಾರೈಸಿ ಅಭಿನಂದಿಸೋಣ



-ಡಾ. ಬಸವರಾಜ ಧಾರವಾಡ.
ಗದಗ.

## ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ ಜಿಲ್ಲಾ ಘಟಕದ ಉದ್ಘಾಟನೆ, ಪದಗ್ರಹಣ ಸಮಾರಂಭ ಇಂದು

# ಬಂಜಾರ ಸಮುದಾಯದ ಇತಿಹಾಸ ರೋಚಕವಾಗಿದೆ

■ ವಿಜಯಸಾಕ್ಷಿ ಸುದ್ದಿ, ಗದಗ

ಅಲೆಮಾರಿ ಸಮುದಾಯದವರಾದ ಬಂಜಾರ ಸಮಾಜ ಕರ್ನಾಟಕದಲ್ಲಿ ಮೊದಲ ಬಾರಿಗೆ ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್‌ನ್ನು ಸ್ಥಾಪಿಸುತ್ತಿರುವುದು ಸಂತಸದ ಸಂಗತಿ. ಬಂಜಾರ ಸಮುದಾಯದ ಇತಿಹಾಸ ರೋಚಕವಾಗಿದ್ದು, ಶ್ರೀಮಂತ ಬಂಜಾರ ಸಾಹಿತ್ಯ, ಸಂಸ್ಕೃತಿಯನ್ನು ದಾಖಲಿಸುವ ದೃಷ್ಟಿಯಿಂದ ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ತು ದಾಪುಗಾಲು ಇಡುತ್ತಿದೆ. ಸರ್ವರೂ ಪದಗ್ರಹಣ ಕಾರ್ಯಕ್ರದಲ್ಲಿ ಪಾಲ್ಗೊಂಡು ಯಶಸ್ವಿಗೊಳಿಸಬೇಕು ಎಂದು ಕರ್ನಾಟಕ ಬಂಜಾರ ಸಾಹಿತ್ಯ ರಾಜ್ಯ ಗೌರವಾಧ್ಯಕ್ಷ ಡಾ. ಪಿ.ಕೆ. ಖಂಡೋಭಾ ಹಾಗೂ ರಾಜ್ಯ ಘಟಕದ ಅಧ್ಯಕ್ಷ ಶ್ರೀಕಾಂತ ಆರ್. ಜಾಧವ್ ಹೇಳಿದರು.



ಅವರು ನಗರದ ಕಳಸಾಪೂರ ರಸ್ತೆಯ ಶ್ರೀರಾಮ ಬಂಜಾರ ಭವನದಲ್ಲಿ ನಡೆದ ಸಮಾರಂಭದ ಪೂರ್ವ ಸಿದ್ಧತಾ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ತು ಗದಗ ಜಿಲ್ಲಾ ಘಟಕದ ಅಧ್ಯಕ್ಷರಾದ ಡಾ. ಬಿ.ಎಲ್. ಚವ್ಹಾಣ ಅವರು ಮಾತನಾಡಿ, ಜೂನ್ 29ರಂದು ಮುಂಜಾನೆ 11 ಗಂಟೆಗೆ ನಗರದ ಕಳಸಾಪೂರ ರಸ್ತೆಯ ಶ್ರೀರಾಮ ಬಂಜಾರ ಭವನದಲ್ಲಿ ಗದಗ ಜಿಲ್ಲಾ ಘಟಕದ ಉದ್ಘಾಟನೆ ಹಾಗೂ ಪದಾಧಿಕಾರಿಗಳ ಪದಗ್ರಹಣ ಸಮಾರಂಭ ಜರುಗಲಿದ್ದು, ವಿಧಾನ ಪರಿಷತ್ ಸದಸ್ಯರಾದ ಎಸ್.ವ್ಹಿ. ಸಂಕನೂರ ಕಾರ್ಯಕ್ರಮ ಉದ್ಘಾಟಿಸುವರು. ಶಿರಹಟ್ಟಿ ವಿಧಾನಸಭಾ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಅಧ್ಯಕ್ಷತೆ ವಹಿಸುವರು ಎಂದರು.

ಮುಖ್ಯ ಅತಿಥಿಗಳಾಗಿ ಗದಗ ಜಿಲ್ಲಾ ಯುವ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಕೃಷ್ಣಗೌಡ ಎಚ್.ಪಾಟೀಲ ಆಗಮಿಸುವರು. ಅತಿಥಿಗಳಾಗಿ ಕರ್ನಾಟಕ ಸಾರಿಗೆ ಸಂಸ್ಥೆಯ ಮುಖ್ಯ ಕಾರ್ಮಿಕ ಕಲ್ಯಾಣಾಧಿಕಾರಿ ಪಿ.ವಾಯ್. ನಾಯಕ, ಹುಬ್ಬಳ್ಳಿ ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ತು ರಾಜ್ಯಾಧ್ಯಕ್ಷ ಶ್ರೀಕಾಂತ ಆರ್.ಜಾಧವ್, ಉಪಾಧ್ಯಕ್ಷರಾದ ಮಂಜಪ್ಪ ಎಲ್, ರೋಣ ತಹಸೀಲ್ದಾರ ನಾಗರಾಜ ಕೆ, ಕರ್ನಾಟಕ ರಾಜ್ಯ ಬಂಜಾರ ನೌಕರರ ಸಂಘದ ಗದಗ ಅಧ್ಯಕ್ಷ ಡಿ.ಎಲ್. ನಾಯಕ, ರೋಣ ತಾಲೂಕಾ ಬಂಜಾರ ಸಮಾಜದ ಅಧ್ಯಕ್ಷ ಲಾಲಪ್ಪ ರಾಠೋಡ ಗಜೇಂದ್ರಗಡ, ಗದಗ ಜಿಲ್ಲಾ ಬಂಜಾರ ವೇದಿಕೆ ಅಧ್ಯಕ್ಷ ಡಾ. ಭೀಮಸಿಂಗ್ ಎನ್.ರಾಠೋಡ, ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ತು ಹಬ್ಬಳ್ಳಿ ರಾಜ್ಯ ಪ್ರಧಾನ ಕಾರ್ಯದರ್ಶಿ ಡಾ. ಎಲ್.ಪಿ. ನಾಯ್ಕ ಕಠಾರಿ, ಗೋರ ಸಿಕವಾಡಿ ರಾಜ್ಯಾಧ್ಯಕ್ಷ ರವಿಕಾಂತ ಅಂಗಡಿ, ಗದಗ ಜಿಲ್ಲಾ ಕಾಂಗ್ರೆಸ್ ಸಮಿತಿ ಎಸ್‌ಸಿ ಘಟಕದ ಕಾರ್ಯದರ್ಶಿ ಸೋಮು ಪಿ.ಲಮಾಡಿ, ಕರ್ನಾಟಕ ರಾಜ್ಯ ಮಧ್ಯಮಿಕ ಶಾಲಾ ನೌಕರರ ಸಂಘ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಎಂ.ಕೆ. ಲಾಮಾಣಿ, ಸ್ಥಳೀಯ ಲೆಕ್ಕ ಪರಿಶೋಧನೆ ಮತ್ತು ಲೆಕ್ಕ ಪತ್ರ ಇಲಾಖೆ ಹಿರಿಯ ಉಪ ನಿರ್ದೇಶಕ ಎಸ್.ವಾಯ್. ಲಮಾಣಿ, ಆರೋಗ್ಯ ಇಲಾಖೆ ಜಿಲ್ಲಾ ಸಮೀಕ್ಷಣಾಧಿಕಾರಿ ಡಾ. ವೆಂಕಟೇಶ ರಾಠೋಡ, ಆರ್.ಡಿ.ಪಿಆರ್ ಗದಗ ಸಹಾಯಕ ಕುಮಾರ ಎಲ್.ಪೂಜಾರ, ಸುವರ್ಣ ರಾಜ್ಯೋತ್ಸವ ಪ್ರಶಸ್ತಿ ಪುರಸ್ಕೃತ ಸುರೇಶ ಟಿ.ರಾಠೋಡ ಆಗಮಿಸುವರು ಎಂದು ಮಾಹಿತಿ ನೀಡಿದರು.

ಕಾಯಾಧ್ಯಕ್ಷ ಡಾ. ಬಿ.ಎಸ್. ರಾಠೋಡ, ಉಪಾಧ್ಯಕ್ಷ ಡಾ. ಕೃಷ್ಣ ಎನ್.ಕಾರಭಾರಿ, ಪ್ರಧಾನ ಕಾರ್ಯದರ್ಶಿ ಡಿ.ಎಸ್. ನಾಯಕ, ಖಜಾಂಚಿ ಡಾ. ಎಂ.ಆರ್. ನಾಯಕ ಸೇರಿದಂತೆ ಪದಾಧಿಕಾರಿಗಳು, ಸದಸ್ಯರು ಹಾಗೂ ಸಮಾಜ ಬಾಂಧವರು ಭಾಗವಹಿಸಿದ್ದರು.

ಬಂಜಾರ ಸಂಸ್ಕೃತಿ ಮತ್ತು ಭಾಷಾ ಅಕಾಡೆಮಿ ಸದಸ್ಯರಾದ ಸಾವಿತ್ರಿ ಲಮಾಣಿ, ಬಂಜಾರ ಗಾಯಕರು ಹಾಗೂ ಸರಿಗಮಪ ರನ್ನರ್ ರಮೇಶ ಲಮಾಣಿ ವಿಶೇಶ ಆಹ್ವಾನಿತರಾಗಿ ಆಗಮಿಸುವರು. ಕರ್ನಾಟಕ ಬಂಜಾರ ಸಾಹಿತ್ಯ ಪರಿಷತ್ ಗದಗ ಜಿಲ್ಲಾ ಘಟಕದ ಅಧ್ಯಕ್ಷ ಡಾ. ಬಿ.ಎಲ್. ಚವ್ಹಾಣ ಗೌರವ ಉಪಸ್ಥಿತಿ ವಹಿಸಲಿದ್ದಾರೆ ಎಂದು ತಿಳಿಸಿ, ಸಮಾಜ ಬಾಂಧವರು ಆಗಮಿಸಿ ಈ ಕಾರ್ಯಕ್ರಮವನ್ನು ಯಶಸ್ವಿಗೊಳಸಬೇಕು ಎಂದು ಡಾ. ಬಿ.ಎಲ್. ಚವ್ಹಾಣ ಮನವಿ ಮಾಡಿದರು.

# ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಸನ್ಯಾಸಿ ವಿರುದ್ಧ ಅತ್ಯಾಚಾರ ಆರೋಪ

■ ವಿಜಯಸಾಕ್ಷಿ ಸುದ್ದಿ, ಕೋಲ್ಕತ್ತಾ

ಪಶ್ಚಿಮ ಬಂಗಾಳದ ಮಹಿಳೆಯೊಬ್ಬರು ಪದ್ಮಶ್ರೀ ಪ್ರಶಸ್ತಿ ಪುರಸ್ಕೃತ ಸನ್ಯಾಸಿ ಕಾರ್ತಿಕ್ ಮಹಾರಾಜ್ ವಿರುದ್ಧ ಅತ್ಯಾಚಾರ ಆರೋಪ ಮಾಡಿದ್ದಾರೆ. ಬಿಜೆಪಿಗೆ ಆಪ್ತರಾಗಿರುವ ಕಾರ್ತಿಕ್ ಮಹಾರಾಜ್ ಆರೋಪಗಳನ್ನು ನಿರಾಕರಿಸಿದ್ದಾರೆ. ಭಾರತ್ ಸೇವಾಶ್ರಮ ಸಂಘದ ಸನ್ಯಾಸಿ ಕಾರ್ತಿಕ್ ಮಹಾರಾಜ್ ಅವರು ಮುರ್ಷಿದಾಬಾದ್‌ನಲ್ಲಿರುವ ಆಶ್ರಮಕ್ಕೆ ತನ್ನನ್ನು ಕರೆದೊಯ್ದು, ಅದರ ಆವರಣದಲ್ಲಿರುವ ಶಾಲೆಯಲ್ಲಿ ಬೋಧನಾ ಕೆಲಸ ಕೊಡಿಸುವುದಾಗಿ ಭರವಸೆ ನೀಡಿದ್ದರು ಮತ್ತು ಆಶ್ರಮದಲ್ಲಿ ವಸತಿಯನ್ನೂ ನೀಡಿದ್ದರು. ಆದರೆ, ಒಂದು ದಿನ ರಾತ್ರಿ ಸನ್ಯಾಸಿ ತನ್ನ ಕೋಣೆಗೆ ನುಗ್ಗಿ ಅತ್ಯಾಚಾರ ಎಸಗಿದ್ದಾರೆ. 2013ರ ಜನವರಿಯಿಂದ ಜೂನ್ ನಡುವೆ ಆರು ತಿಂಗಳ ಅವಧಿಯಲ್ಲಿ ಸನ್ಯಾಸಿ ಕಾರ್ತಿಕ್ ಕನಿಷ್ಠ 12 ಬಾರಿ ತನ್ನ ಮೇಲೆ ಅತ್ಯಾಚಾರ ಎಸಗಿದ್ದಾರೆ ಎಂದು ಮಹಿಳೆ ಆರೋಪಿಸಿದ್ದಾರೆ.

# ಮಂಗಳೂರಿನ ಕುಡುಪುವಿನಲ್ಲಿ ಅಶ್ರಫ್ ಗುಂಪು ಹತ್ಯೆ: ಸತ್ಯಶೋಧನಾ ವರದಿ ಬಿಡುಗಡೆ

■ ವಿಜಯಸಾಕ್ಷಿ ಸುದ್ದಿ, ಮಂಗಳೂರು

ಮಂಗಳೂರು ನಗರದ ಹೊರವಲಯ ಕುಡುಪುವಿನಲ್ಲಿ ಏಪ್ರಿಲ್ 27ರಂದು ನಡೆದ ಕೇರಳದ ಮುಸ್ಲಿಂ ಯುವಕ ಮೊಹಮ್ಮದ್ ಅಶ್ರಫ್ ಅವರ ಗುಂಪು ಹತ್ಯೆಯ ಕುರಿತ ಸತ್ಯಶೋಧನಾ ವರದಿಯನ್ನು ಶನಿವಾರ (ಜೂ.28) ಬೆಂಗಳೂರಿನ ಪ್ರೆಸ್ ಕ್ಲಬ್‌ನಲ್ಲಿ ಬಿಡುಗಡೆ ಮಾಡಲಾಗಿದೆ.

ಸಾಮಾಜಿಕ ಹೋರಾಟಗಾರರ ತಂಡವು ಮಂಗಳೂರಿಗೆ ಭೇಟಿ ನೀಡಿ ಸಂಗ್ರಹಿಸಿದ ಮಾಹಿತಿಗಳ ವರದಿಯನ್ನು 'ಮಂಗಳೂರು ಗುಂಪು ಹತ್ಯೆ ಪ್ರಕರಣ-ಸಂವಿಧಾನದ ಕಗ್ಗೊಲೆಯ ಬಗ್ಗೆ ಮೌನ ಮುರಿಯಬೇಕಿದೆ' ಎಂಬ ಹೆಸರಿನಲ್ಲಿ ಪೀಪಲ್ಸ್ ಯೂನಿಯನ್ ಫಾರ್ ಸಿವಿಲ್ ಲಿಬರ್ಟೀಸ್ ಕರ್ನಾಟಕ (ಪಿಯುಸಿಎಲ್), ಅಸೋಸಿಯೇಷನ್ ಆಫ್ ಪ್ರೊಟೆಕ್ಷನ್ ಫಾರ್ ಸಿವಿಲ್ ರೈಟ್ಸ್ ಕರ್ನಾಟಕ (ಎಪಿಸಿಆರ್) ಮತ್ತು ಆಲ್ ಇಂಡಿಯಾ ಲಾಯರ್ಸ್ ಅಸೋಸಿಯೇಷನ್ ಫಾರ್ ಜಸ್ಟೀಸ್ ಕರ್ನಾಟಕ (ಎಐಎಲ್‌ಎಜೆ) ಜಂಟಿಯಾಗಿ ಬಿಡುಗಡೆ ಮಾಡಿದೆ.

## ನಮ್ಮ ಕೃಷಿ ನೀತಿಯಲ್ಲಿ ಲೋಪದೋಷಗಳಿವೆ-ಬಸವರಾಜ ಬೊಮ್ಮಾಯಿ

# ರೈತ ಪರವಾಗಿರುವ ಮಾರುಕಟ್ಟೆ ಸೃಷ್ಟಿಯಾಗಬೇಕು

■ ವಿಜಯಸಾಕ್ಷಿ ಸುದ್ದಿ, ರಾಣೆಬೆನ್ನೂರು

ನಮ್ಮ ದೇಶದ ಎಲ್ಲ ಜನರಿಗೂ ಆಹಾರ ದೊರೆಯುತ್ತಿದೆ. ಆದರೆ, ಆಹಾರ ಬೆಳೆಯುವ ರೈತರ ಪರಿಸ್ಥಿತಿ ಶೋಚನೀಯವಾಗಿದೆ. ಇದು ವಿಪರ್ಯಾಸ. ನಮ್ಮ ಕೃಷಿ ನೀತಿಯಲ್ಲಿ ಲೋಪದೋಷಗಳಿವೆ, ಹೀಗಾಗಿ ರೈತರ ಪರವಾಗಿರುವ ಮಾರುಕಟ್ಟೆ ಸೃಷ್ಟಿಯಾಗಬೇಕು ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಅಭಿಪ್ರಾಯ ಪಟ್ಟಿದ್ದಾರೆ.

ತಾಲೂಕಿನ ಹನುಮನ ಮಟ್ಟಿಯಲ್ಲಿರುವ ಕೃಷಿ ವಿಶ್ವವಿದ್ಯಾಲಯ ಧಾರವಾಡದ ಕೃಷಿ ಮಹಾವಿದ್ಯಾಲಯ ಐ.ಸಿ.ಎ ಆರ್ ಕೃಷಿ ವಿಜ್ಞಾನ ಕೇಂದ್ರಕ್ಕೆ, ಭೇಟಿ ನೀಡಿ, ಮಹಾವಿದ್ಯಾಲಯದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಈ ರಾಜ್ಯದ ಕೃಷಿಯ ಭವಿಷ್ಯವನ್ನು ಬರೆಯುವ ವಿಜ್ಞಾನಿಗಳು ಇಲ್ಲಿ ಸೇರಿದ್ದೀರಿ. ತಮ್ಮ ಜೀವನದಲ್ಲಿ ಬೇರೆ ಕ್ಷೇತ್ರ ಆಯ್ಕೆ ಮಾಡಿಕೊಳ್ಳಲು ಅವಕಾಶ ಇದ್ದರೂ ಕೂಡ ತಾವು ಕೃಷಿಯನ್ನು ಆಯ್ಕೆ ಮಾಡಿದ್ದೀರಿ. ಎಂಜನೀಯರಿಂಗ್, ಕಾಮರ್ಸ್ ಮೆಡಿಕಲ್ ಕ್ಷೇತ್ರ ಇದ್ದರೂ, ನಮ್ಮ ಮೂಲ ಕಾಯಕ ಕೃಷಿ ನಮ್ಮ ದೇಶದ ಇತಿಹಾಸ ಕೃಷಿ, ಭವಿಷ್ಯವೂ ಕೃಷಿ. ನೀವು ಕೃಷಿಯ ವಿದ್ಯಾರ್ಥಿಗಳಾಗಿ ದೇಶದ ಭವಿಷ್ಯ ಕೃಷಿ ಅಂತ ನಿರೂಪಿಸಿ ತೋರಿಸಬೇಕಾಗಿದೆ. ಅದು ಯಾವಾಗ ಆಗುತ್ತದೆ ಎಂದರೆ ಕೃಷಿ ಕೂಡ ಲಾಭದಾಯಕವಾದಾಗ ಮಾತ್ರ ಎಂದರು.



ಕೃಷಿ ಕೇವಲ ಲಾಭವಷ್ಟೇ ಅಲ್ಲ. ಅದಕ್ಕಿಂತಲೂ ಹೆಚ್ಚು ಈ ದೇಶದ ನಾಗರಿಕರಿಗೆ ಆಹಾರ ಒದಗಿಸುವ ಜವಾಬ್ದಾರಿ ಇದೆ. ಬೇರೆ ಯಾವುದೇ ಕಂಪನಿ, ಸಂಸ್ಥೆಗೆ ಈ ಜವಾಬ್ದಾರಿ ಇಲ್ಲ. ನಮ್ಮ ದೇಶ ಸ್ವಾತಂತ್ರ್ಯ ಆದಾಗ 33 ಕೋಟಿ ಜನಸಂಖ್ಯೆ ಇತ್ತು ಈಗ 130 ಕೋಟಿಯಾಗಿದೆ. ಆಗ 33 ಕೋಟಿ ಜನರಿಗೆ ಆಹಾರ ಒದಗಿಸಲು ಸಾಧ್ಯವಾಗಿರಲಿಲ್ಲ. ವಿದೇಶಗಳಿಂದ ಆಹಾರ ಪದಾರ್ಥ ಆಮದು ಮಾಡಿಕೊಳ್ಳುತ್ತಿದ್ದೇವು. ಆಹಾರದ ಸುರಕ್ಷತೆ ಒಂದು ದೇಶಕ್ಕೆ ಇಲ್ಲ ಅಂದರೆ ಆ ದೇಶ ಸ್ವಾಭಿಮಾನಿ ದೇಶ ಆಗುವುದಿಲ್ಲ. ಯಾವ ದೇಶಕ್ಕೆ ಸ್ವಾಭಿಮಾನ ಇರುವುದಿಲ್ಲವೋ ಆ ದೇಶಕ್ಕೆ ಅಸ್ತಿತ್ವ ಕೂಡ ಇರುವುದಿಲ್ಲ. ಈ ದೇಶದ ಸ್ವಾಭಿಮಾನ, ಸ್ವಾವಲಂಬನೆ, ಹಸಿರು ಕ್ರಾಂತಿ ಮಾಡಿರುವುದು ರೈತ. ಈಗ 133 ಕೋಟಿ ಜನರಿಗೆ ಆಹಾರ ಸಿಗುತ್ತಿದೆ. ಆದರೆ, ಆಹಾರ ಬೆಳೆಯುವ ರೈತರ ಪರಿಸ್ಥಿತಿ ಶೋಚನೀಯವಾಗಿದೆ. ಇದು ವಿಪರ್ಯಾಸ. ನಮ್ಮ ಕೃಷಿ ನೀತಿಯಲ್ಲಿ ಎಲ್ಲೋ ಲೋಪದೋಷಗಳಿವೆ ಎನ್ನುವುದು ಬಹಳ ಸ್ಪಷ್ಟ ಎಂದು ಹೇಳಿದರು.

ಮಳೆ, ಗಾಳಿ, ಬಿಸಲು ಎಲ್ಲವೂ ನಿಸರ್ಗದ ಕ್ರಿಯೆ ಒಂದು ಕಡೆಯಾದರೆ. ಇನ್ನೊಂದು ಕಡೆ ನಾವು ಸೃಷ್ಟಿ ಮಾಡಿರುವ ಮಾರುಕಟ್ಟೆಗಳು ರೈತನಿಗೆ ಸಹಕಾರಿಯಾಗಬೇಕು. ಆದರೆ, ಅವು ಆಗಿಲ್ಲ. ರೈತನ ಅನುಕೂಲಕ್ಕಾಗಿ ಎಪಿಎಂಸಿ ಮಾಡಿದ್ದೇವೆ. ಎಲ್ಲ ಮಧ್ಯವರ್ತಿಗಳ ಕೈಯಲ್ಲಿ ಸಿಲುಕಿವೆ. ಹೀಗಾಗಿ ರೈತರ ಪರವಾಗಿರುವ ಮಾರುಕಟ್ಟೆ ಸೃಷ್ಟಿಯಾಗಬೇಕು. ಏಕೆಂದರೆ ರೈತರು ಬಹಳ ಮುಗ್ದರಿದ್ದಾರೆ. ಸುಗ್ಗಿ ಮಾಡಿದರೆ ಹಂಗಾಮು ಮುಗಿಯಿತು ಎಂದುಕೊಂಡಿದ್ದಾರೆ. ನಿಜವಾದ ಕೆಲಸ ಸುಗ್ಗಿಯಾದ ನಂತರ ಶುರುವಾಗುತ್ತದೆ. ಬೆಳೆಯನ್ನು ಸುರಕ್ಷಿತವಾಗಿ ಇಡುವುದು, ಸೂಕ್ತ ಮಾರುಕಟ್ಟೆ ಹುಡುಕುವುದು, ಸೂಕ್ತ ಬೆಲೆ ಪಡೆಯುವುದು ದೊಡ್ಡ ಚೈನ್ ಇದೆ ಎಂದರು.

ಈ ಸಂದರ್ಭದಲ್ಲಿ ಮಾಜಿ ಶಾಸಕರಾದ ವಿರುಪಾಕ್ಷಪ್ಪ ಬಳ್ಳಾರಿ, ಮಹಾವಿದ್ಯಾಲಯದ ಡೀನ್ ಡಾ.ಎ.ಜಿ ಕೊಪ್ಪದ, ಮಾಜಿ ಡೀನ್ ಡಾ.ಜೆ.ಎಸ್ ಹಳ್ಳಿ, ಆಡಳಿತ ಮಂಡಳಿಯ ಸದಸ್ಯರಾದ ವೀರನಗೌಡ ಪೊಲೀಸಗೌಡ್ರ ಸೇರಿದಂತೆ ಸುತ್ತಮುತ್ತಲಿನ ಗ್ರಾಮದ ರೈತರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

# ಮಾನಸಿಕ ಆರೋಗ್ಯ ಉತ್ತೇಜಿಸುವ ಕಾರ್ಯಾಗಾರ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯಲ್ಲಿ ಸಿ.ಬಿ.ಎಸ್.ಇಯ ಸೆಂಟರ್ ಆಫ್ ಎಕ್ಸಲೆನ್ಸ್ ಬೆಂಗಳೂರು ವತಿಯಿಂದ ಹುಬ್ಬಳ್ಳಿ-ಧಾರವಾಡ ನಾರ್ಥ್ ಕರ್ನಾಟಕ ಸಹೋದಯ ಅಡಿ ಬರುವ ಶಾಲಾ ಶಿಕ್ಷಕರಿಗೆ ಮಾನಸಿಕ ಆರೋಗ್ಯ ಮತ್ತು ಯೋಗಕ್ಷೇಮವನ್ನು ಉತ್ತೇಜಿಸುವ ಕಾರ್ಯಾಗಾರವನ್ನು ಆಯೋಜಿಸಲಾಗಿತ್ತು.

ಕಾರ್ಯಾಗಾರದಲ್ಲಿ ಹುಬ್ಬಳ್ಳಿ, ಧಾರವಾಡ, ನರೇಗಲ್, ರೋಣ, ಮುಂಡರಗಿ ಮುಂತಾದೆಡೆಯಿಂದ ಆಗಮಿಸಿದ 60 ಶಿಕ್ಷಕರು ಪಾಲ್ಗೊಂಡಿದ್ದರು. ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾದ ಮನೋಜ ಭಟ್ಟ, ರಕ್ಷಾ ಕಾಮತ್, ಬಾಲ ವಿನಾಯಕ ವಿದ್ಯಾನಿಕೇತನ ಶಾಲೆಯ ನಿರ್ದೇಶಕ ವಿನಾಯಕ್ ಆರ್, ಆಡಳಿತ ಮಂಡಳಿ ಸದಸ್ಯರಾದ ಗಾಯಿತ್ರಿ ವಿ, ಪ್ರಾಚಾರ್ಯ ವಿ.ಎಂ. ಅಡ್ನೂರ ಕಾರ್ಯಾಗಾರಕ್ಕೆ ಚಾಲನೆ ನೀಡಿದರು.

ಶಾಲೆಯ ಪಂ. ಪುಟ್ಟರಾಜ ಗವಾಯಿ ಸಂಗೀತ ತಂಡದ ಪ್ರಗತಿ ಮಾಳಶೆಟ್ಟಿ ಹಾಗೂ ಸಂಗಡಿಗರು ಪ್ರಾರ್ಥನಾ ಗೀತೆ ಹಾಡಿದರು. ಶಿಕ್ಷಕಿ ನಯನಾ ರಾಯ್ಕರ್ ಸ್ವಾಗತಿಸಿ ನಿರೂಪಿಸಿದರು. ಹಿರಿಯ ಶಿಕ್ಷಕಿ ಶುಭಾಂಗಿನಿ ದಡ್ಡಿ ಅತಿಥಿಗಳನ್ನು ಪರಿಚಯಿಸಿದರು. ಶಿಕ್ಷಕಿ ಸಿಂಧೂ ಸಾಂಬ್ರಾಣಿ ವಂದಿಸಿದರು.

# ಅತಿಥಿ ಉಪನ್ಯಾಸಕರನ್ನು ಆಯ್ಕೆಗೆ ಪರಿಗಣಿಸಿ

▶▶ ಮೊದಲನೇ ಪುಟದಿಂದ

ನಡೆಸುವುದು ಅನಿವಾರ್ಯ ಎಂದು ಎಚ್ಚರಿಸಿದರು. ಕೇವಲ ಅತಿಥಿ ಉಪನ್ಯಾಸಕರಿಗೆ ಮಾತ್ರ ಕಾನೂನು ತೊಡಕು ಹೇಳುವ ಸರಕಾರದ ವಿರುದ್ಧ ರಾಜ್ಯದ ಎಲ್ಲ ಅತಿಥಿ ಉಪನ್ಯಾಸಕರು ಈ ನಡೆಯನ್ನ ವಿರೋಧಿಸಿ ಪ್ರತಿಭಟನೆಯಲ್ಲಿ ಭಾಗಿಯಾಗುವುದಾಗಿ ಡಾ. ಹನುಮಂತಗೌಡ ಕಲ್ಮನಿ ತಿಳಿಸಿದರು.

ಪತ್ರಿಕಾಗೋಷ್ಠಿಯಲ್ಲಿ ಎ.ಎ. ಸೊಪ್ಪಿಮಠ, ವಿರೇಶ ಬಡಿಗೇರ, ಸುಭಾಷ ಜಾಲಿಹಾಳ, ವಿಜಯಕುಮಾರ ದೇಸಾಯಿಗೌಡ್ರ, ಭಗತಸಿಂಗ್ ನವಲೂರಕರ, ಶರಣು ಮರಿಗುಪ್ಪಿ, ನಾಗರತ್ನ ಬಳ್ಳಾರಿ, ಪಾರ್ವತಿ ತಾರಿಹಾಳ, ಗೀತಾ ಮೇಟಿ, ಪದ್ಮಾ ತಳಕಲ್, ಆರೀಫಾಬಾನು, ಎಂ.ಸಿ. ಆಶಾ, ನಾಜಿಯಾ ಅತ್ತಹರ ಮುಂತಾದ ಅತಿಥಿ ಉಪನ್ಯಾಸಕರು ಪಾಲ್ಗೊಂಡಿದ್ದರು.

# ಓಬಿಸಿ ಪ್ರಮಾಣಪತ್ರ ನೀಡುವಂತೆ ಒತ್ತಾಯಿಸಿ ಧರಣಿ

■ ವಿಜಯಸಾಕ್ಷಿ ಸುದ್ದಿ, ಗಜೇಂದ್ರಗಡ

ಮುಸ್ಲಿಂ ಸಮಾಜ ಬಾಂಧವರಿಗೆ ಓಬಿಸಿ ಪ್ರಮಾಣಪತ್ರ ನೀಡದೆ ಶೈಕ್ಷಣಿಕವಾಗಿ, ಸಾಮಾಜಿಕವಾಗಿ ಸಾಕಷ್ಟು ಅನ್ಯಾಯವಾಗುತ್ತಿರುವುದರಿಂದ ಮುಸ್ಲಿಂ ಸಮುದಾಯದವರಿಗೆ ಓಬಿಸಿ ಪ್ರಮಾಣ ನೀಡಲು ಒತ್ತಾಯಿಸಿ ಜೂನ್ 30ರಂದು ಬೆಳ್ಳಿಗ್ಗೆ 10 ಗಂಟೆಗೆ ಗಜೇಂದ್ರಗಡ ತಹಸೀಲ್ದಾರರ ಕಚೇರಿ ಆವರಣದಲ್ಲಿ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗಿದೆ.

ತಾಲೂಕಿನ ಸಮಸ್ತ ಮುಸ್ಲಿಂ ಸಮುದಾಯದವರು ಈ ಸತ್ಯಾಗ್ರಹದಲ್ಲಿ ಭಾಗವಹಿಸುವಂತೆ ಹೋರಾಟ ಸಮಿತಿಯ ಸಂಚಾಲಕರಾದ ದಾವಲಸಾಬ ತಾಳಿಕೋಟಿ, ಫಯಾಜ್ ತೋಟದ ಪ್ರಕಟನೆಯಲ್ಲಿ ತಿಳಿಸಿದ್ದಾರೆ.

## ಪ್ರವಾಸಿಗರನ್ನು ಕೈಬೀಸಿ ಕರೆಯುತ್ತಿರುವ ಕಪ್ಪತ್ತಗುಡ್ಡದ ಮೋಡಗಳು

# ಮಂಜಿನ ವಾತಾವರಣಕ್ಕೆ ಮನಸೋತ ಪ್ರವಾಸಿಗ

■ ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ

ಉತ್ತರ ಕರ್ನಾಟಕ ಸಹ್ಯಾದ್ರಿ ಬೆಟ್ಟ ಎಂದೇ ಗುರುತಿಸಿಕೊಂಡಿರುವ ಕಪ್ಪತ್ತಗುಡ್ಡದಲ್ಲಿ ಸಧ್ಯ ಮುಂಗಾರು ಮಳೆ ಪ್ರಾರಂಭವಾದಾಗಿನಿಂದಲೂ ಬೆಟ್ಟಗಳ ಮಧ್ಯೆ ಮೋಡಗಳು ಹಾದುಹೋಗುವ, ಮಂಜು ಕವಿದ ವಾತಾವರಣಕ್ಕೆ ಮನಸೋತ ಪ್ರವಾಸಿಗರನ್ನು ಕೈಬೀಸಿ ಕರೆಯುವ ತಾಣವಾಗಿ ಹೊರಹೊಮ್ಮುತ್ತಿದೆ. ಸೂರ್ಯೋದಯ/ಸೂರ್ಯಾಸ್ತವನ್ನು ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ನೋಡುತ್ತಿದ್ದ ಜನತೆಗೆ ಇದೀಗ ಅದೇ ದೃಶ್ಯಾವಳಿ ಕಪ್ಪತ್ತಗುಡ್ಡದಲ್ಲೂ ಸಹ ಈ ವಿಸ್ಮಯವನ್ನು ಕಣ್ತುಂಬಿಕೊಳ್ಳುತ್ತಿದ್ದಾರೆ.

ಕಪ್ಪತ್ತಗುಡ್ಡದ (ಗಾಳಿ ಗುಂಡಿ ಬಸಪ್ಪ) ವ್ಯಾಪ್ತಿಯಲ್ಲಿ ಅರಣ್ಯ ಇಲಾಖೆ ವತಿಯಿಂದ ವ್ಯೂಪಾಯಿಂಟ್ ಗುರುತಿಸಲಾಗಿದ್ದು, ಇಲ್ಲಿ ಸೂರ್ಯೋದಯದ ವೇಳೆಗೆ ಬೆಟ್ಟಗಳ ಮಧ್ಯೆ ಮಂಜು ಸೇರಿದಂತೆ ಮೋಡಳು ಅತೀ ಸಮೀಪವಾಗಿ ಕಾಣುತ್ತಿದ್ದು, ಇದನ್ನು ನೋಡಲು ಪ್ರವಾಸಿಗರ ದಂಡೇ ಹರಿದು ಬರುತ್ತಿದೆ.




ಜೊತೆಗೆ ಇಲಾಖೆಯು ಟ್ರೆಂಡಿಂಗ್‌ಗೆ ಪೂರಕವಾಗಿ ಸ್ಥಾಪಿಸಿರುವ 'ನಮ್ಮ ಕಪ್ಪತ್ತಗುಡ್ಡ' ಎಂಬ ಲೋಗೋ ಕೂಡ ಆಕರ್ಷಣೀಯವಾಗಿದ್ದು, ಇಲ್ಲಿ ಫೋಟೋ ಕ್ಲಿಕ್ಕಿಸಲು ಪ್ರವಾಸಿಗರು ಮುಗಿ ಬೀಳುತ್ತಿದ್ದಾರೆ. ವಿಶೇಷವಾಗಿ ವಾರಾಂತ್ಯ ಮತ್ತು ಸರಕಾರಿ ರಜಾ ದಿನಗಳಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಪ್ರವಾಸಿಗರು ಈ ಸ್ಥಳಕ್ಕೆ ಆಗಮಿಸುತ್ತಿದ್ದಾರೆ.

ಪ್ರವಾಸಿಗರ ಸಂಖ್ಯೆ ಹೆಚ್ಚಾಗುತ್ತಿದ್ದಂತೆಯೇ ಅರಣ್ಯ ಇಲಾಖೆಯು ಪ್ಲಾಸ್ಟಿಕ್ ಬಳಕೆ ನಿಷೇಧಕ್ಕೆ ಮುಂದಾಗಿದೆ. ಇದಕ್ಕಾಗಿ ಪ್ರವಾಸಿಗರ ತಪಾಸಣೆ ನಡೆಸಿ ಪ್ಲಾಸ್ಟಿಕ್ ವಸ್ತುಗಳಿಗೆ 30 ರೂ.ಗಳ ಸ್ಟಿಕ್ಕರ್‌ನ್ನು ಅಂಟಿಸಿ ವ್ಯೂ ಪಾಯಿಂಟ್ ಕಡೆಗೆ ಬಿಡುತ್ತಿದ್ದು, ಮರಳಿ ಬರುವಾಗ ಸ್ಟಿಕ್ಕರನ್ನು ತೋರಿಸಿ 30ರೂ.ಗಳನ್ನು ಮರಳಿ ನೀಡುವ ವ್ಯವಸ್ಥೆಯನ್ನು ಮಾಡಿಕೊಂಡಿದ್ದಾರೆ. ಕಾಲ್ನಡಿಗೆಯಲ್ಲಿ ಟ್ರೆಕ್ಕಿಂಗ್ ಮಾಡುವವರಿಗೆ ತಲಾ 25 ರೂ, ಕಾರ್‌ಗೆ 100ರೂ, ಬೈಕ್‌ಗೆ 50 ರೂ. ಶುಲ್ಕ ನಿಗದಿಪಡಿಸಲಾಗಿದೆ.

ಅರಣ್ಯ ಇಲಾಖೆಯ ಸುಪರ್ದಿಯಲ್ಲಿ ಬರುವ ಶಿರಹಟ್ಟಿ ತಾಲೂಕಿನ ಕಡಕೋಳದ ದೈವೀವನದಲ್ಲಿ ಕಪ್ಪತ್ತಗುಡ್ಡ ವೀಕ್ಷಣೆಗೆ ಬರುವ ಪ್ರವಾಸಿಗರ ಅನುಕೂಲಕ್ಕಾಗಿ ವಸತಿ ಸಮುಚ್ಚಯಗಳನ್ನು ನಿರ್ಮಿಸಿದ್ದು, ಪ್ರವಾಸಿಗರಿಗೆ ಇದು ಅನುಕೂಲವಾಗಿದೆ. ಸೂಕ್ತ ಪಾರ್ಕಿಂಗ್ ವ್ಯವಸ್ಥೆ, ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ, ಕೂರಲು ಖುರ್ಚಿಗಳು, ಪರಗೋಲಾಗಳ ವ್ಯವಸ್ಥೆಯನ್ನು ಸಹ ಮಾಡಲಾಗಿದೆ.

ಅರಣ್ಯ ಇಲಾಖೆ ವತಿಯಿಂದಲೇ ಬೇರೆ ಪ್ರವಾಸಿ ತಾಣಗಳಲ್ಲಿ ಈಗಾಗಲೇ ಇರುವಂತೆ ಸಫಾರಿ ವಾಹನಗಳ ವ್ಯವಸ್ಥೆ ಕಪ್ಪತ್ತಗುಡ್ಡ ಅರಣ್ಯ ಪ್ರದೇಶದಲ್ಲಿಯೂ ಜಾರಿಯಾಗಬೇಕು. ಇದರಿಂದ ಕಪ್ಪತ್ತಗುಡ್ಡ ವ್ಯೂ ಪಾಯಿಂಟ್ ಸೇರಿದಂತೆ ಸುತ್ತಮುತ್ತಲಿನ ಪ್ರದೇಶ ಸ್ವಚ್ಛವಾಗಿಟ್ಟುಕೊಳ್ಳುವುದರ ಜೊತೆಗೆ ಅಪಾರ ಸಸ್ಯ ಸಂಕುಲ, ವನ್ಯಜೀವಿಗಳಿಗೂ ಆಗಬಹುದಾದ ತೊಂದರೆಯನ್ನು ತಪ್ಪಿಸಬಹುದಾಗಿದೆ ಎಂಬುದು ಪ್ರವಾಸಿಗರ ಅನಿಸಿಕೆಯಾಗಿದೆ.

> ಮುಂಗಾರು ಪ್ರಾರಂಭವಾದಾಗಿನಿಂದಲೂ ಕಪ್ಪತ್ತಗುಡ್ಡದಲ್ಲಿ ಇಲಾಖೆ ವತಿಯಿಂದ ಗುರುತಿಸಿರುವ ವ್ಯೂ ಪಾಯಿಂಟ್‌ನಲ್ಲಿ ಮೋಡಗಳು ಅತೀ ಕೆಳಗಡೆ ಸಂಚರಿಸುತ್ತಿರುವದರಿಂದ ಪ್ರವಾಸಿಗರ ಆಕರ್ಷಣೀಯ ಸ್ಥಳವಾಗಿದೆ. ಪ್ರವಾಸಿಗರಿಗೆ ಅಗತ್ಯ ಮೂಲಸೌಲಭ್ಯ ಕಲ್ಪಿಸಲಾಗುತ್ತಿದ್ದು, ಪ್ಲಾಸ್ಟಿಕ್ ನಿಷೇಧದ ಬಗ್ಗೆ ಕಟ್ಟುನಿಟ್ಟಿನ ಕ್ರಮ ಹಾಗೂ ಟ್ರೆಕ್ಕಿಂಗ್ ಮಾಡುವವರಿಗೆ ಆನ್‌ಲೈನ್ ಬುಕ್ಕಿಂಗ್ ವ್ಯವಸ್ಥೆಗೂ ಸಹ ಕ್ರಮ ಕೈಕೊಳ್ಳಲಾಗುತ್ತಿದೆ.
>
> – ರಾಮಪ್ಪ ಪೂಜಾರ.
> ವಲಯ ಅರಣ್ಯಾಧಿಕಾರಿ.

> ಈ ಕುರಿತು ಪ್ರತಿಕ್ರಿಯಿಸಿದ ಮಹಾಂತೇಶ ದಶಮನಿ, ಎಪ್ಪತ್ತು ಗಿರಿಗಿಂತ ಕಪ್ಪತ್ತಗಿರಿ ಮೇಲು ಎಂಬ ನಾಣ್ಣುಡಿಯಂತೆ ಕಪ್ಪತ್ತಗುಡ್ಡದಲ್ಲಿ ಅರಣ್ಯ ಇಲಾಖೆ ಗುರುತಿಸಿರುವ ವ್ಯೂ ಪಾಯಿಂಟ್ ಬಳಿ ಮೋಡಗಳು ಸಮೀಪ ಕಾಣುತ್ತಿದ್ದು ಈ ದೃಶ್ಯವನ್ನು ಕಣ್ತುಂಬಿಕೊಳ್ಳಲು ಇಲ್ಲಿ ಪ್ರವಾಸಿಗರ ಸಂಖ್ಯೆ ಹೆಚ್ಚಾಗುತ್ತಿದ್ದು, ಅರಣ್ಯ ಪ್ರದೇಶ ವ್ಯಾಪ್ತಿಯಲ್ಲಿ ಸಫಾರಿ ವಾಹನ ವ್ಯವಸ್ಥೆ ಜಾರಿಯಾದರೆ ಅರಣ್ಯ ಸ್ವಚ್ಛತೆ ಮತ್ತು ಸುರಕ್ಷತೆಗೆ ಆದ್ಯತೆ ನೀಡಿದಂತಾಗುವುದು ಎಂದರು.

# ಇಂದಿರಾ ಕ್ಯಾಂಟೀನ್ ಸ್ಥಳಾಂತರಕ್ಕೆ ಮನವಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಶ್ರೀ ಗಾನಯೋಗಿ ಪಂಡಿತ್ ಪುಟ್ಟರಾಜ ಗವಾಯಿಗಳವರ ಬಸ್ ನಿಲ್ದಾಣದಲ್ಲಿ ನಿರ್ಮಾಣವಾಗುತ್ತಿರುವ ಇಂದಿರಾ ಕ್ಯಾಂಟೀನ್ ಬೇರೆ ಕಡೆ ಸ್ಥಳಾಂತರಿಸಬೇಕು ಎಂದು ಬೀದಿಬದಿ ಎಗ್‌ರೈಸ್, ಇಡ್ಲಿ-ವಡಾ, ಪಲಾವ್, ಹೋಟೆಲ್ ವ್ಯಾಪಾರಸ್ಥರಿಂದ ಕೆ.ಎಸ್.ಆರ್.ಟಿ.ಸಿ ಅಧಿಕಾರಿಗಳಿಗೆ ಹಾಗೂ ಗದಗ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ವ್ಯಾಪಾರಸ್ಥರು ಮಾತನಾಡಿ, ಇಂದಿರಾ ಕ್ಯಾಂಟೀನ್ ಮಾಡುವುದಕ್ಕೆ ನಮ್ಮ ವಿರೋಧವಿಲ್ಲ. ಆದರೆ ಬಸ್ ನಿಲ್ದಾಣದಲ್ಲಿ ಬೇಡ. ಈಗ ಸಣ್ಣ-ಪುಟ್ಟ ವ್ಯಾಪಾರಸ್ಥರು ಬಸ್ ನಿಲ್ದಾಣಕ್ಕೆ ಬಂದು-ಹೋಗುವ ಪ್ರಯಾಣಿಕರನ್ನು ನಂಬಿ ವ್ಯಾಪಾರ ನಡೆಸುತ್ತಿದ್ದೇವೆ. ಆದರೆ ಈಗ ಇಂದಿರಾ ಕ್ಯಾಂಟೀನ್ ಆಗುವುದರಿಂದ ನಮ್ಮ ವ್ಯಾಪಾರ ಸಂಪೂರ್ಣ ಸ್ಥಗಿತಗೊಳ್ಳುತ್ತದೆ. ಆದ ಕಾರಣ ಇಂದಿರಾ ಕ್ಯಾಂಟೀನ್ ಗದಗ ಜಿಲ್ಲಾ ಆಸ್ಪತ್ರೆ ಕಡೆ ಸ್ಥಳಾಂತರಿಸಬೇಕು ಎಂದು ಮನವಿ ಮಾಡಿದರು.

## ಶ.ಸಾ.ಪ ಪದಾಧಿಕಾರಿಗಳ ಸಭೆಯಲ್ಲಿ ಕೆ.ಎ. ಬಳಿಗೇರ ಅಭಿಮತ

# ವಚನಗಳು ಸಮಾಜದ ಅಂಕು-ಡೊಂಕು ತಿದ್ದುತ್ತವೆ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಅಂದಿನ ಶರಣರು ಈ ನಾಡಿಗೆ ನೀಡಿದ ಕೊಡುಗೆ ಅಪಾರವಾಗಿದ್ದು, 12ನೇ ಶತಮಾನದಲ್ಲಿ ಬಾಳಿ ಹೋದ ಶರಣರ ವಚನಗಳನ್ನು ಜನ ಮಾನಸದಲ್ಲಿ ಬಿತ್ತುವ ಕಾರ್ಯವನ್ನು ಶರಣ ಸಾಹಿತ್ಯ ಪರಿಷತ್ತು ಹಾಗೂ ಕದಳಿ ಮಹಿಳಾ ವೇದಿಕೆಗಳು ಮಾಡಬೇಕು ಎಂದು ಶರಣು ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎ. ಬಳಿಗೇರ ಹೇಳಿದರು.

ಪಟ್ಟಣದ ಅಕ್ಕ ಮಹಾದೇವಿ ದೇವಸ್ಥಾನದಲ್ಲಿ ಜರುಗಿದ ಶ.ಸಾ.ಪ ಪದಾಧಿಕಾರಿಗಳ ಸಭೆಯಲ್ಲಿ ಅವರು ಮಾತನಾಡಿದರು.

ಬಸವಾದಿ ಶರಣರು ಬರೆದಿರುವ ವಚನಗಳು ಕನ್ನಡ ಸಾಹಿತ್ಯದ ಅಮೂಲ್ಯ ರತ್ನಗಳು. ಪ್ರತಿ ತಿಂಗಳಲ್ಲಿ ಎರಡು ಬಾರಿ ಶರಣ ಸಾಹಿತ್ಯ ಪರಿಷತ್ತಿನ ಗೋಷ್ಠಿಗಳು ನಡೆಯುವಂತಾಗುವ ಮೂಲಕ ಶರಣರ ವಚನಗಳ ಮಹತ್ವವನ್ನು ಇಂದಿನ ಮಕ್ಕಳಲ್ಲಿ ಬೆಳೆಸಬೇಕು. ಶರಣರ ನುಡಿಗಟ್ಟುಗಳನ್ನು ಕಂಠಪಾಠ ಮಾಡುವ ವಿದ್ಯಾರ್ಥಿಗಳಲ್ಲಿ ಜಾಗೃತಿ ಮೂಡಿಸಬೇಕು. ಶರಣರು ಕನ್ನಡ ಸಾಹಿತ್ಯಕ್ಕೆ ವಚನಗಳು ಮೂಲಕ ಚೈತನ್ಯ ತುಂಬುವ ಕೆಲಸ ಮಾಡಿದರು. ಶರಣರ ವಚನಗಳು ಎಂದೆಂದೂ ಅಳಿಸಲಾಗದ ಹಾಗೂ ಸಮಾಜದ ಅಂಕು-ಡೊಂಕು ತಿದ್ದುವ ಕಾರ್ಯ ಮಾಡುತ್ತಿವೆ. ಶರಣು ಸಾಹಿತ್ಯ ಪರಿಷತ್ತಿಗೆ ಸದಸ್ಯರನ್ನು ಮಾಡುವುದು, ದತ್ತಿ ನಿಧಿ ಸ್ಥಾಪನೆ ಮಾಡುವ ಮೂಲಕ ಶರಣರ ಚಿಂತನ ಮಂಥನ ನಡೆಸುವ ಮೂಲಕ ಜನ ಸಾಮಾನ್ಯರಲ್ಲಿ ವಚನಗಳು ಬಗ್ಗೆ ಆಸಕ್ತಿ ಮೂಡಿಸುವ ಕಾರ್ಯ ಮಾಡುವುದು ಅಗತ್ಯವಾಗಿದೆ ಎಂದರು. ಈ ವೇಳೆ ಸುಲೋಚನಾ ಜವಾಯಿ ಸಹೋದರಿಯರು ಸಹೋದರ ದಿ. ಡಾ. ಎಸ್.ಬಿ. ಜವಾಯಿ ಹೆಸರಿನಲ್ಲಿ ದತ್ತಿದಾನ ನೀಡಿದರು. ಗದಗ ಮಹಿಳಾ ಕದಳಿ ವೇದಿಕೆಯ ಅಧ್ಯಕ್ಷೆ ಸುಧಾ ಹುಚ್ಚಣ್ಣವರ, ಬಂಡಾಯ ಸಾಹಿತಿ ಸಿ.ಜಿ. ಹಿರೇಮಠ, ಶಸಾಪ ತಾಲೂಕಾ ಅಧ್ಯಕ್ಷ ಎಲ್. ಎಸ್. ಅರಳಹಳ್ಳಿ, ನಿರ್ಮಲಾ ಅರಳಿ, ಅಶ್ವಿನಿ ಅಂಕಲಕೋಟಿ, ಪ್ರತಿಮಾ ಮಹಾಜನ್‌ಶೆಟ್ಟರ್, ಜೆ.ಎಸ್. ರಾಮಶೆಟ್ಟರ, ಮಾಲಾದೇವಿ ದಂದರಗಿ, ಬಸಣ್ಣ ಬೆಂಡಿಗೇರಿ ಮಾತನಾಡಿದರು. ಸಭೆಯಲ್ಲಿ ಎಂ.ಎಂ. ಹಿರೇಮಠ, ಬಸವರಾಜ ಸಂಗಪ್ಪ ಶೆಟ್ಟರ್, ಕವಿತಾ ಅರಳಿಹಳ್ಳಿ, ರತ್ನಾ ಕರ್ಕಿ ಇದ್ದರು.



> ಲಕ್ಷ್ಮೇಶ್ವರ ತಾಲೂಕಿನಲ್ಲಿ ಶರಣ ಸಾಹಿತ್ಯ ಪರಿಷತ್ತಿನ ಸಮ್ಮೇಳನ ನಡೆಯಲಿ ಎಂಬುದು ಎಲ್ಲರ ಆಶಯವಾಗಿದೆ. ಅಕ್ಟೋಬರ್ ಅಥವಾ ನವೆಂಬರ್ ತಿಂಗಳಲ್ಲಿ ಶರಣ ಸಾಹಿತ್ಯ ಸಮ್ಮೇಳನ ನಡೆಯುವ ಬಗ್ಗೆ ಚಿಂತನೆ ಮಾಡಲಾಗುತ್ತದೆ. ಜುಲೈ 2ರಂದು ವಚನ ಪಿತಾಮಹ ಫ.ಗು. ಹಳಕಟ್ಟಿ ಅವರು ಜನ್ಮ ದಿನಾಚರಣೆಯನ್ನು ಆಚರಿಸುವಂತೆ ಕೆ.ಎ. ಬಳಿಗೇರ ಮನವಿ ಮಾಡಿದರು.

# ಉಡಾನ್ ಟ್ರೇಡ್ ಫೇರ್ ಉದ್ಘಾಟನೆ



■ ವಿಜಯಸಾಕ್ಷಿ ಸುದ್ದಿ, ಗದಗ

ಜೀತೋ ಲೇಡಿಸ್ ವಿಂಗ್ ವತಿಯಿಂದ ನಗರದ ಸಿಡಿಓ ಮಹಾಜನವಾಡಿ ಗುಜ್ಜರ ಬಸ್ತಿಯಲ್ಲಿ ಉಡಾನ್ ಟ್ರೇಡ್ ಫೇರ್-ವಸ್ತು ಪ್ರದರ್ಶನ ಮತ್ತು ಮಾರಾಟ ಮಳಿಗೆಯ ಉದ್ಘಾಟನೆಯನ್ನು ಗದಗ ಜಿಲ್ಲಾ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಜೀತೋ ಲೇಡಿಸ್ ವಿಂಗ್‌ನ ಮಹಿಳೆಯರು ಒಂದೆಡೆ ಸೇರಿ ಮಾರಾಟ ಮಳಿಗೆಗಳನ್ನು ಪ್ರದರ್ಶಿಸುತ್ತಿರುವುದು ಹೆಮ್ಮೆಯ ವಿಷಯ. ಇಂತಹ ಕಾರ್ಯಕ್ರಮದಲ್ಲಿ ಮಹಿಳೆಯರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಳ್ಳುವುದರಿಂದ ಮಹಿಳೆಯರ ಸಬಲೀಕರಣಯಾಗುವುದು ಎಂದರು.

ಇದೇ ಸಂದರ್ಭದಲ್ಲಿ ಪೊಲೀಸ್ ಇಲಾಖೆಯಲ್ಲಿ ಸುದೀರ್ಘ ಸೇವೆ ಸಲ್ಲಿಸಿದ ಗದಗ ಜಿಲ್ಲಾ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಂ.ಬಿ. ಸಂಕದ ನಿವೃತ್ತಿ ಹೊಂದುತ್ತಿರುವ ನಿಮಿತ್ತ ಅವರನ್ನು ಸನ್ಮಾನಿಸಿ, ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಸಂತೋಷ ಗಡಿಯಾ, ಇಂದಿರಾ ಬಾಗಮಾರ, ಸ್ವೀಟಿ ಬನಸಾಲಿ, ಪ್ರವೀಣ ಚೌಧರಿ, ಅನಿಲಕುಮಾರ ಜೈನ್, ಭರತ ಪಾಟವಾರಿ, ಪಿಂಕಿ ಜೈನ್, ದೀಲಿಪ ಜೈನ್, ಸಂಜೀವ ಬಾಗಮಾರ, ಪ್ರವೀಣ ಭಾಫಣಾ, ಸುರೇಶ ಓಸ್ವಾಲ, ಜೀತೇಂದ್ರ ಜೈನ್ ಸೇರಿದಂತೆ ಜೀತೋ ಲೇಡಿಸ್ ವಿಂಗ್‌ನ ಮಹಿಳಾ ಪದಾಧಿಕಾರಿಗಳು, ಗಣ್ಯ ವ್ಯಾಪಾರಸ್ಥರು, ಉದ್ದಿಮೆದಾರರು ಉಪಸ್ಥಿತರಿದ್ದರು.

# ಸೌಹಾರ್ದತೆಯಿಂದ ಮೊಹರಂ ಆಚರಿಸಿ




■ ವಿಜಯಸಾಕ್ಷಿ ಸುದ್ದಿ, ಮುಳಗುಂದ

ಪಟ್ಟಣದಲ್ಲಿ ಎಲ್ಲಾ ಹಬ್ಬ-ಹರಿದಿನಗಳನ್ನು ಶಾಂತಿ-ಸೌಹಾರ್ದತೆಯಿಂದ ಆಚರಣೆ ಮಾಡಲಾಗುತ್ತಿದ್ದು, ಮೊಹರಂ ಹಬ್ಬವನ್ನು ಎಲ್ಲರೂ ಶಾಂತಿ-ಸೌಹಾರ್ದತೆಯಿಂದ ಆಚರಣೆ ಮಾಡಬೇಕು ಎಂದು ಮುಳಗುಂದ ಪೊಲೀಸ್ ಠಾಣೆ ಸಿಪಿಐ ಸಂಗಮೇಶ ಶಿವಯೋಗಿ ಹೇಳಿದರು.

ಅವರು ಪಟ್ಟಣದ ಪೊಲೀಸ್ ಠಾಣೆಯಲ್ಲಿ ಮುಳಗುಂದ ವ್ಯಾಪ್ತಿಯ ಗ್ರಾಮಗಳ ಮುಖಂಡರ ಶಾಂತಿ ಸಭೆಯನ್ನುದ್ದೇಶಿಸಿ ಮಾತನಾಡಿ, ಮೊಹರಂ ಹಬ್ಬವನ್ನು ಹಿಂದೂ-ಮುಸ್ಲಿಂ ಬಾಂಧವರು ಶಾಂತಿ ಸೌಹಾರ್ದತೆಯಿಂದ ಆಚರಣೆ ಮಾಡುತ್ತಾ ಬಂದಿದ್ದಾರೆ. ಆ ನಿಟ್ಟಿನಲ್ಲಿ ಎಲ್ಲರೂ ಶಾಂತಿ-ಸೌಹಾರ್ದತೆಯಿಂದ ಹಬ್ಬವನ್ನು ಆಚರಿಸಬೇಕು ಎಂದರು.

ಈ ಸಂದರ್ಭದಲ್ಲಿ ಅಶೋಕ ಹುಣಶಿಮರದ, ಎ.ಡಿ. ಮುಜಾವಾರ, ಮುನ್ನಾ ಡಾಲಾಯತ, ಬಾಪುಸಾಬ ಕಿಲ್ಲೇದಾರ, ದೇವರಾಜ ಸಂಗನಪೇಟಿ, ರಮೇಶ ಮ್ಯಾಗೇರಿ, ಪೊಲೀಸ್ ಸಿಬ್ಬಂದಿಗಳಾದ ಬಸವರಾಜ ಕುರ್ತಕೋಟಿ, ಎಚ್.ಬಿ. ಗುಡ್ಡಣ್ಣವರ, ವಿ.ವೈ. ಪೂಜಾರ, ನಾಗರಾಜ ಸೌಳಭಾವಿ, ಸಂತೋಷ ಹಿರೇಮಠ ಹಾಗೂ ಮುಳಗುಂದ ವ್ಯಾಪ್ತಿಯ ಮುಖಂಡರು ಇದ್ದರು.

# ಜನರ ಸುರಕ್ಷತೆಗೆ ಪ್ರಥಮ ಆದ್ಯತೆ ಇರಲಿ

▶▶ ಮೊದಲನೇ ಪುಟದಿಂದ

ಜನಸಾಮಾನ್ಯರಿಗೆ ದೊರೆಯುವುದಿಲ್ಲ ಎಂಬ ದೂರುಗಳಿದ್ದು, ಇದಕ್ಕೆ ಈ ಬಾರಿ ಅವಕಾಶ ನೀಡಬಾರದು. ಜನಸಾಮಾನ್ಯರ ಕೆಲಸ ಕಾರ್ಯಗಳು, ಅಭಿವೃದ್ಧಿ ಕಾರ್ಯಗಳು ಯಾವುದೇ ಕಾರಣಕ್ಕೂ ಕುಂಠಿತವಾಗಬಾರದು ಎಂದು ತಿಳಿಸಿದರು.

ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಚಿವರಾದ ಎಚ್.ಸಿ. ಮಹದೇವಪ್ಪ, ಕೆ.ಜೆ. ಜಾರ್ಜ್, ಶಿವರಾಜ ತಂಗಡಗಿ, ಕೆ. ವೆಂಕಟೇಶ್, ಸುರೇಶ್ ಭೈರತಿ, ಜಿ.ಟಿ. ದೇವೇಗೌಡ, ರಮೇಶ್ ಬಂಡಿಸಿದ್ದೇಗೌಡ, ಪುಟ್ಟರಂಗಶೆಟ್ಟಿ, ತನ್ವೀರ್ ಸೇಠ್, ಡಾ. ಯತೀಂದ್ರ ಎಸ್, ಡಾ. ಡಿ.ತಿಮ್ಮಯ್ಯ, ಅನಿಲ್ ಕುಮಾರ್, ಎ.ಆರ್. ಕೃಷ್ಣಮೂರ್ತಿ, ಮಧು ಜಿ.ಮಾದೇಗೌಡ, ಕೆ.ಹರೀಶ್ ಗೌಡ, ದರ್ಶನ್ ಧ್ರುವನಾರಾಯಣ, ಡಾ. ಮಾನಸ, ಪುಷ್ಪಾ ಅಮರನಾಥ್, ಅಯೂಬ್ ಖಾನ್, ಅಪರ ಮುಖ್ಯ ಕಾರ್ಯದರ್ಶಿ ಗೌರವ ಗುಪ್ತಾ, ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿ ಅಂಜುಂ ಪರ್ವೇಜ್ ಮತ್ತಿತರರು ಉಪಸ್ಥಿತರಿದ್ದರು.

# ಅಧಿಕಾರದಲ್ಲಿ ಜನಪರ ಕೆಲಸ ಮಾಡಬೇಕು

▶▶ ಮೊದಲನೇ ಪುಟದಿಂದ

ಅಷ್ಟೇ ವ್ಯತ್ಯಾಸ ಎಂದು ಹೇಳಿದರು.

2026ಕ್ಕೆ ಕರ್ನಾಟಕದಲ್ಲಿ ಮಧ್ಯಂತರ ಚುನಾವಣೆ ನಡೆದು ರಾಜ್ಯದಲ್ಲಿ ಮತ್ತೆ ಬಿಜೆಪಿ ಅಧಿಕಾರಕ್ಕೆ ಬರುತ್ತದೆ. ಅವರ ಪಾಪದ ಕೊಡ ತುಂಬಿದೆ. ನಾವು ವ್ಯಕ್ತಿ ಸ್ವಾತಂತ್ರ್ಯ, ಅಭಿವ್ಯಕ್ತಿ ಸ್ವಾತಂತ್ರ್ಯ ಎತ್ತಿ ಹಿಡಿಯುವ ಕೆಲಸ ಮಾಡಬೇಕು. ಇದು ಎರಡನೇ ಸ್ವಾತಂತ್ರ್ಯ ಸಂಗ್ರಾಮ. ವಿಕಸಿತ ಭಾರತದ ಪ್ರಧಾನಿಗಳ ಕನಸು ನನಸು ಮಾಡಲು ನಾವೆಲ್ಲ ನಿರಂತರವಾಗಿ ಎಚ್ಚರಿಕೆಯಿಂದಿರಬೇಕು ಎಂದು ಹೇಳಿದರು.

ಈ ಸಂಧರ್ಭದಲ್ಲಿ ಕೇಂದ್ರ ಸಚಿವರಾದ ಪ್ರಲ್ಹಾದ ಜೋಶಿ, ಮಾಜಿ ಶಾಸಕರು ಹಾಗೂ ಭಾರತೀಯ ಜನತಾ ಪಕ್ಷದ ಜಿಲ್ಲಾಧ್ಯಕ್ಷರಾದ ವಿರೂಪಾಕ್ಷಪ್ಪ ಬಳ್ಳಾರಿ, ಮಾಜಿ ಶಾಸಕರಾದ ಅರುಣಕುಮಾರ ಪೂಜಾರ, ರಾಜ್ಯ ತುರ್ತು ಪರಿಸ್ಥಿತಿ ಸಮಿತಿಯ ಸಂಚಾಲಕ ಮಹೇಂದ್ರ ಕೌತಾಳ, ತುರ್ತು ಪರಿಸ್ಥಿತಿ ಸಂದರ್ಭದಲ್ಲಿ ಕಾರಾಗೃಹ ಶಿಕ್ಷೆ ಅನುಭವಿಸಿದ ರಾಮಕೃಷ್ಣ ತುಕಾರಾಮ ತಾಂಬೆ ಸೇರಿದಂತೆ ಪ್ರಮುಖರು ಉಪಸ್ಥಿತರಿದ್ದರು.

# ನಿಧನ

## ಪ್ರಮೀಳಾ ಬಗಾಡೆ



**ಮುಳಗುಂದ:** ಪಟ್ಟಣದ ಕೋಟಿ ಓಣಿಯ ನಿವಾಸಿ ಪ್ರಮೀಳಾ ಬಗಾಡೆ (70) ಶನಿವಾರ ನಿಧನರಾಗಿದ್ದಾರೆ. ಮೃತರು ಪತಿ, ಓರ್ವ ಪುತ್ರ, ಓರ್ವ ಪುತ್ರಿ ಹಾಗೂ ಅಪಾರ ಬಂಧು-ಬಳಗ ಅಗಲಿದ್ದಾರೆ.

## ರೇಖಾ ಸುರೇಶ ಅಕ್ಕಿ



**ಮುಳಗುಂದ:** ಪಟ್ಟಣದ ಚಿಂದಿಪೇಟಿ ಓಣಿಯ ನಿವಾಸಿ ರೇಖಾ ಸುರೇಶ ಅಕ್ಕಿ (50) ಶನಿವಾರ ನಿಧನರಾಗಿದ್ದಾರೆ. ಮೃತರು ಪತಿ, ಓರ್ವ ಪುತ್ರ, ಇಬ್ಬರು ಪುತ್ರಿಯರು ಹಾಗೂ ಅಪಾರ ಬಂಧು ಬಳಗವನ್ನು ಅಗಲಿದ್ದಾರೆ.

## ಪದಾಧಿಕಾರರಿಗಳ ಪದಗ್ರಹಣ, ಸಾಧಕರಿಗೆ ಸನ್ಮಾನ ಕಾರ್ಯಕ್ರಮದಲ್ಲಿ ಅನಿಲ್‌ಕುಮಾರ್ ಸಿದ್ದಮ್ಮನಹಳ್ಳಿ

# ಹೋರಾಟದ ಜೊತೆ ಶೈಕ್ಷಣಿಕ ಪ್ರಗತಿಯಾಗಲಿ



■ ವಿಜಯಸಾಕ್ಷಿ ಸುದ್ದಿ, ಗದಗ

ನಗರದ ಪ್ರವಾಸಿ ಮಂದಿರದಲ್ಲಿ ಯುವ ಕರ್ನಾಟಕ ಭೀಮಸೇನೆ ಯುವಶಕ್ತಿ ಸಂಘ 1ನೇ ವಾರ್ಡ್ ಘಟಕದಿಂದ ಆಯೋಜಿಸಿದ್ದ ಪದಗ್ರಹಣ ಹಾಗೂ ಸಾಧಕರಿಗೆ ಸನ್ಮಾನ ಕಾರ್ಯಕ್ರಮವನ್ನು ಅಖಿಲ ಕರ್ನಾಟಕ ವಾಲ್ಮೀಕಿ ಮಹಾಸಭಾ ಯುವ ಘಟಕದ ಅಧ್ಯಕ್ಷ ಅನಿಲ್‌ಕುಮಾರ ಸಿದ್ದಮ್ಮನಹಳ್ಳಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು, ನಿಮ್ಮ ಸಂಘಟನೆಯಿಂದ ಸಾಮಾಜಿಕ ಹೋರಾಟದ ಜೊತೆಗೆ ಶಿಕ್ಷಣದ ವ್ಯವಸ್ಥೆಯೆಲ್ಲಾಗುವ ತಪ್ಪುಗಳನ್ನು ಸಮಾಜದ ಮುಖ್ಯವಾಹಿನಿಗೆ ತಂದು ಪರಿಹಾರ ಒದಗಿಸುವ ನಿಟ್ಟಿನಲ್ಲಿ ನಿಮ್ಮ ಹೋರಾಟಗಳಿರಲಿ. ಶಿಕ್ಷಣದಿಂದ ವಂಚಿತರಾಗುವ ಭವಿಷ್ಯದ ಯುವ ಪೀಳಿಗೆಗೆ ನಿಮ್ಮಿಂದ ಸಹಾಯ ದೊರಕಲಿ ಎಂದರು.

ಮುಖ್ಯ ಅತಿಥಿಯಾಗಿ ದಲಿತ ಸಂಘರ್ಷ ಸಮಿತಿಗಳ ಒಕ್ಕೂಟದ ಸಂಚಾಲಕ ಶರೀಫ್ ಬಿಳೆಯಲಿ, ಕರವೇ ತಾಲೂಕು ಅಧ್ಯಕ್ಷ, ಚಲವಾದಿ ಸಮಾಜದ ಗದಗ ತಾಲೂಕು ಅಧ್ಯಕ್ಷ ಮುತ್ತಣ್ಣ ವೈ. ಚವಡಣ್ಣವರ ಮಾತನಾಡಿದರು. ಜಿಲ್ಲಾ ಉಪಾಧ್ಯಕ್ಷರಾದ ಖಾಜಾಸಾಬ್ ಗಬ್ಬೂರ್ ಪ್ರಸ್ತಾವಿಕವಾಗಿ ಮಾತನಾಡಿದರು.

ಶಹರ ಘಟಕದ ಅಧ್ಯಕ್ಷ ಶಬ್ಬೀರ್ ತಹಶೀಲ್ದಾರ್, ನಜೀರ್ ಬಳ್ಳಾರಿ, ಖಾದರ್‌ಭಾಷಾ ನವಲಗುಂದ, ಸಾಧಿಕ್ ಧಾರವಾಡ, ಅಬ್ದುಲ್‌ರಶೀದ್ ನಾಗರದಿನ್ನಿ, ಮೊಮ್ಮದ್‌ರಫೀಕ್ ರಾಜೀವ್ ಗಾಂಧಿ ನಗರ, ಲಿಯಾಕತಲಿ ಮುಲ್ಲಾ, ಇಮಾಮ ಕದಡಿ, ಜಹೀರ್ ಬಾಸಂಗವಾಲೆ, ಅಸ್ಫಾಕ್ ಸುಂಕದ್, ಫಾರೂಕ್ ದಂಡಿನ, ಆನಂದ್ ಗಡ್ಡದವರ, ಮುಸ್ತಫ ಶಿರೋಳ, ಸಮೀರ್ ಸರ್ಫರಾಜ ನಾಯಕರ, ಫಯಾಜ್ ಕಬಾಡಿ, ಶಾಬುದ್ದೀನ್ ಧಾರವಾಡ, ಮಾಬುಸಾಬ್ ತೌಸೀಫ್ ಗೋಗೇರಿ, ಸೋಹೀಲ್ ಶಾಬಾದ್ ಸಾಧಿಕ್ ಅರಗಂಜಿ, ಅಬ್ಬು ವಾನಂಬಾಡಿ, ಇಲ್ಯಾಸ್ ಭಾಗವಹಿಸಿದ್ದರು. ಜಿಲ್ಲಾಧ್ಯಕ್ಷ ರಾಮು ಬಾಗಲಕೋಟೆ ಸ್ವಾಗತಿಸಿದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಸೀರ್ ಚಿಕೆನಕೊಪ್ಪ ಕಾರ್ಯಕ್ರಮ ನಿರೂಪಿಸಿದರು. ಜಬಿವುಲ್ಲಾ ಬೋಡ್ಲೇಖಾನ್ ವಂದಿಸಿದರು.

> 1ನೇ ವಾರ್ಡಿನ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ಯಂಕಪ್ಪ ತಾಳದವರ, ಹೊಂಬಳ ಗ್ರಾಮ ಪಂಚಾಯಿತಿಗೆ ನೂತನ ಅಧ್ಯಕ್ಷರಾಗಿ ಆಯ್ಕೆಯಾದ ದಾವಲ್‌ಬಿ ರಾ.ಹೊಂಬಳ, ಸಾಧಕರಾದ ಕಾಂಗ್ರೆಸ್ ಎಸ್.ಟಿ ಘಟಕದ ಅಧ್ಯಕ್ಷ ವಸಂತ ಸಿದ್ದಮ್ಮನಹಳ್ಳಿ, ರಾಷ್ಟ್ರಮಟ್ಟದ ಜಂಗಿ ನಿಕಾಲಿ ಕುಸ್ತಿಯಲ್ಲಿ ಪ್ರಥಮ ಪ್ರಶಸ್ತಿ ಪಡೆದ ರಾಹುಲ್ ಸಿದ್ದಮ್ಮನಹಳ್ಳಿ ಇವರನ್ನು ಸನ್ಮಾನಿಸಿ ಗೌರವಿಸಲಾಯಿತು.

# ಉಪನ್ಯಾಸ ಕಾರ್ಯಕ್ರಮ ಇಂದು





■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಶಿವಾನಂದ ನಗರದ ಬಸವ ಸಮುದಾಯ ಭವನದಲ್ಲಿ ಜೂನ್ 29ರ ಬೆಳಿಗ್ಗೆ 10ಕ್ಕೆ ನಡೆಯಲಿರುವ ಬಸವದಳದ 1652ನೇ ಶರಣ ಸಂಗಮದಲ್ಲಿ ವಚನ ಸಂಶೋಧನೆಯ ಪಿತಾಮಹ ಡಾ. ಫ.ಗು. ಹಳಕಟ್ಟಿಯವರ 61ನೇ ಸ್ಮರಣೆ ಹಾಗೂ ಪ್ರವಚನ ಪಿತಾಮಹ ಪೂಜ್ಯ ಲಿಂಗಾನಂದ ಮಹಾಸ್ವಾಮಿಗಳವರ 30ನೇ ಸ್ಮರಣೆ ಕುರಿತು ಉಪನ್ಯಾಸ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.

ಅಧ್ಯಕ್ಷತೆಯನ್ನು ಬಸವದಳದ ಅಧ್ಯಕ್ಷ ಶರಣ ವಿ.ಕೆ. ಕರೇಗೌಡ್ರ ವಹಿಸುವರು. ಶರಣ ಎನ್.ಎಚ್. ಹಿರೇಸಕ್ಕರಗೌಡ್ರ ಡಾ. ಫ. ಗು. ಹಳಕಟ್ಟಿಯವರ ಕುರಿತು ಹಾಗೂ ಶರಣೆ ಗಂಗಮ್ಮ ಹೂಗಾರ ಪೂಜ್ಯ ಲಿಂಗಾನಂದ ಮಹಾಸ್ವಾಮಿಗಳವರ ಕುರಿತು ಉಪನ್ಯಾಸ ಮಾಡುವರು.

ಬಸವದಳದ ಸದಸ್ಯರು, ಶರಣ ಸಾಹಿತ್ಯಾಭಿಮಾನಿಗಳು ಹಾಗೂ ಆಸಕ್ತರು ಭಾಗವಹಿಸಬೇಕೆಂದು ಸಂಘಟಕರ ಪರವಾಗಿ ಪ್ರಕಾಶ ಅಸುಂಡಿಯವರು ವಿನಂತಿಸಿದ್ದಾರೆ.

ದೂದನಾನಾ ದರ್ಗಾ ರಸ್ತೆ (ಕಾಂಕ್ರೀಟ್ ರಸ್ತೆ) ಅಭಿವೃದ್ಧಿಗೆ ಭೂಮಿಪೂಜೆ ನೆರವೇರಿಸಿದ ಶಾಸಕ ಡಾ. ಚಂದ್ರು ಲಮಾಣಿ

# ಸಾರ್ವಜನಿಕರ ಬೇಡಿಕೆ ಈಡೇರಿದಂತಾಗಿದೆ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಈ ಸಂದರ್ಭದಲ್ಲಿ ಮಾತನಾಡಿದ ಅವರು, ಮುಖ್ಯ ಬಜಾರ್ ರಸ್ತೆಯಿಂದ ದೂದಪೀರಾಂ ದರ್ಗಾವರೆಗಿನ ಮುಖ್ಯ ರಸ್ತೆ ಅಭಿವೃದ್ಧಿಯಾಗಬೇಕು ಎಂಬುದು ಪಟ್ಟಣದ ಜನರ ಹಲವಾರು ವರ್ಷಗಳ ಬೇಡಿಕೆಯಾಗಿದೆ. ಇದೀಗ 2 ಕೋಟಿ ರೂ ವೆಚ್ಚದಲ್ಲಿ ಭರಮದೇವರ ಸರ್ಕಲ್‌ನಿಂದ ದರ್ಗಾವರೆಗೆ ಸಿಸಿ ರಸ್ತೆ ನಿರ್ಮಾಣವಾಗುತ್ತಿದ್ದು, ಜನರ ಬೇಡಿಕೆ ಈಡೇರಿದಂತಾಗಿದೆ ಎಂದು ಶಾಸಕ ಡಾ. ಚಂದ್ರು ಲಮಾಣಿ ಹೇಳಿದರು.

ಅಲ್ಪಸಂಖ್ಯಾತರ ಕಾಲೋನಿ ಅಭಿವೃದ್ಧಿ ಯೋಜನೆಯ 2ಕೋಟಿ ರೂ ಅನುದಾನದಲ್ಲಿ ಪಟ್ಟಣದ ದೂದನಾನಾ ದರ್ಗಾ ರಸ್ತೆ (ಕಾಂಕ್ರೀಟ್ ರಸ್ತೆ) ಅಭಿವೃದ್ಧಿಗೆ ಭೂಮಿಪೂಜೆ ನೆರವೇರಿಸಿ ಅವರು ಮಾತನಾಡಿದರು.

ಈ ಸಂದರ್ಭದಲ್ಲಿ ಅಟೋ ಚಾಲಕರು ಸೇರಿ ಕೆಲ ಸಾರ್ವಜನಿಕರು ಮಾತನಾಡಿ, ನಗರೋತ್ಥಾನ ಯೋಜನೆಯಡಿ ದರ್ಗಾ ಹತ್ತಿರವೇ ರಸ್ತೆ ಅಭಿವೃದ್ಧಿಗೆ ರಸ್ತೆ ಅಗೆದು ವರ್ಷಗಳಿಂದ ಅರ್ಧಕ್ಕೇ ನಿಲ್ಲಿಸಿದ್ದಾರೆ. ಇನ್ನು ಮುಖ್ಯ ಬಜಾರ್ ರಸ್ತೆಯಿಂದ ದರ್ಗಾ ಸಂಪರ್ಕಿಸುವ 600 ಮೀಟರ್ ರಸ್ತೆ ಕಾಮಗಾರಿಯನ್ನು ಅರ್ಧಕ್ಕೆ ನಿಲ್ಲಿಸಿ ತಿಂಗಳುಗಳೇ ಕಳೆದಿವೆ. ಇದರಿಂದಾಗಿ ನಿತ್ಯ ಅಟೋ ಚಾಲಕರು, ರೈತರು, ವ್ಯಾಪಾರಸ್ಥರು, ಭಕ್ತರು ಸಾಕಷ್ಟು ತೊಂದರೆ ಅನುಭವಿಸುತ್ತಿದ್ದಾರೆ. ಈಗಾಗಲೇ ಅರ್ಧಕ್ಕೆ ನಿಲ್ಲಿಸಿರುವ ಕಾಮಗಾರಿಗಳನ್ನು ಪೂರ್ಣಗೊಳಿಸಿ ಮುಂದುವರೆದ ರಸ್ತೆ ಕಾಮಗಾರಿಗೆ ಭೂಮಿಪೂಜೆ ಮಾಡಬೇಕು ಎಂದು ಆಗ್ರಹಿಸಿದರು. ಈ ವೇಳೆ ಶಾಸಕರ ಬೆಂಬಲಿಗರು ಮತ್ತು ಅಟೋ ಚಾಲಕರ ನಡುವೆ ವಾಗ್ವಾದ ನಡೆದಾಗ, ಪಿಎಸ್‌ಐ ನಾಗರಾಜ ಗಡಾದ ನೇತೃತ್ವದಲ್ಲಿ ಪೊಲೀಸರು ಪರಿಸ್ಥಿತಿ ನಿಭಾಯಿಸಿದರು.

ಮುಂದುವರೆದು ಮಾತನಾಡಿದ ಶಾಸಕ ಡಾ. ಚಂದ್ರು ಲಮಾಣಿ, ಸರ್ಕಾರದಿಂದ ಅನುದಾನ ತಂದು ಅಭಿವೃದ್ಧಿ ಕಾರ್ಯ ಮಾಡುವುದು ಕಷ್ಟವಿದೆ. ಈ ಸಂದರ್ಭದಲ್ಲಿ ಕೆಲವರು ವೈಯಕ್ತಿಕ ಹಿತಾಸಕ್ತಿಯಿಂದ ಅಭಿವೃದ್ಧಿ ಕಾರ್ಯಗಳಿಗೆ ಅಡ್ಡಿಪಡಿಸುತ್ತಿದ್ದಾರೆ. ಇಂತವರ ವಿರುದ್ಧ ಜಿಲ್ಲಾಧಿಕಾರಿಗಳು ಮತ್ತು ಪೊಲೀಸರಿಗೆ ದೂರು ನೀಡಿ ಕಡಿವಾಣ ಹಾಕಬೇಕು. ಹಾವಳಿ ಆಂಜನೇಯ ದೇವಸ್ಥಾನದ ಹತ್ತಿರ ನಡೆಯುತ್ತಿರುವ ರಸ್ತೆ ಕಾಮಗಾರಿಗೆ ಹಾಕಿರುವ ಮಣ್ಣು ಸರಿ ಇಲ್ಲ ಎಂದು ಸುಳ್ಳು ಆರೋಪ ಮಾಡಿ ಕೆಲಸ ಬಂದ್ ಮಾಡಿಸಿದ್ದಾರೆ. ಈ ಮಣ್ಣನ್ನು ತಜ್ಞರಿಂದ ಪರೀಕ್ಷೆ ಮಾಡಿಸಲಾಗಿ ಅದು ಯೋಗ್ಯವಾದ ಮಣ್ಣು ಎಂದು ವರದಿ ಬಂದಿದೆ.



> ಗುತ್ತಿಗೆದಾರರು ಉತ್ತಮ ಗುಣಮಟ್ಟ ರಸ್ತೆ ನಿರ್ಮಿಸಬೇಕು. ಸಾರ್ವಜನಿಕರು ಮತ್ತು ದರ್ಗಾ ಕಮಿಟಿಯವರು ಗುಣಮಟ್ಟದ ಕಾಮಗಾರಿಯಾಗುವಂತೆ ನಿಗಾ ವಹಿಸಬೇಕು. ಮುಂಬರುವ ದಿನಗಳಲ್ಲಿ ಇನ್ನೂ ಹೆಚ್ಚಿನ ಅನುದಾನ ತಂದು ಪಟ್ಟಣದ ಅಭಿವೃದ್ಧಿಗೆ ಶ್ರಮಿಸುತ್ತೇನೆ.
>
> – ಡಾ. ಚಂದ್ರು ಲಮಾಣಿ.
> ಶಾಸಕರು.

ತಮ್ಮ ಸ್ವ ಹಿತಾಸಕ್ತಿಗಾಗಿ ಆರೋಪ/ಅಡ್ಡಿಪಡಿಸಿದರೆ ದರ್ಗಾ ಕಮಿಟಿ ಹಾಗೂ ಪುರಸಭೆ ಸದಸ್ಯರು ಜಿಲ್ಲಾಧಿಕಾರಿ ಮತ್ತು ಪೊಲೀಸರಿಗೆ ದೂರು ನೀಡುವ ದಿಟ್ಟ ನಿರ್ಣಯ ತೆಗೆದುಕೊಳ್ಳಬೇಕು ಎಂದರು.

ಪುರಸಭೆ ಉಪಾಧ್ಯಕ್ಷ ಫಿರ್ದೋಸ್ ಆಡೂರ, ಸ್ಥಾಯಿ ಕಮಿಟಿ ಚೇರಮನ್ ವಿಜಯ ಕರಡಿ, ಸದಸ್ಯರಾದ ಜಯಮ್ಮ ಅಂದಲಗಿ ಮಹಾದೇವಪ್ಪ ಅಣ್ಣಿಗೇರಿ, ಎಸ್.ಕೆ. ಹವಾಲ್ದಾರ, ಸಿಕಂದರ ಕಣಕೆ, ರಮೇಶ ಗಡದವರ, ಅಶ್ವಿನಿ ಅಂಕಲಕೋಟಿ, ವಾಣಿ ಹತ್ತಿ, ಪೂರ್ಣಿಮಾ ಪಾಟೀಲ, ಮಂಜುಳಾ ಗುಂಜಳ, ನೀಲಪ್ಪ ಹತ್ತಿ, ಎಂ.ಆರ್. ಪಾಟೀಲ, ದೂದನಾನಾ ದರ್ಗಾ ಕಮಿಟಿ ಅಧ್ಯಕ್ಷ ಸುಲೇಮಾನಸಾಬ ಕಣಕೆ, ಅಂಜುಮನ್ ಕಮಿಟಿ ಅಧ್ಯಕ್ಷ ಮುಕ್ತಾರಅಹ್ಮದ ಗದಗ, ದಾದಾಪೀರ ಮುಚ್ಚಾಲೆ, ಜಾಕೀರಹುಸೇನ ಹವಾಲ್ದಾರ, ಬಸವರಾಜ ಚಕ್ರಸಾಲಿ, ಮಂಜುನಾಥ ಹೊಗೆಸೊಪ್ಪಿನ, ವಾಸು ಬೋಮಲೆ, ಪ್ರಕಾಶ ಮಾದನೂರ, ಕಲಂದರ ಸೂರಣಗಿ, ಪ್ರಕಾಶ ಗುತ್ತಲ, ಅಲ್ಪ ಸಂಖ್ಯಾತರ ಇಲಾಖೆ ಅಧಿಕಾರಿ ಅಮಿತ ಬಿದರಿ, ಪುರಸಭೆ ಮುಖ್ಯಾಧಿಕಾರಿ ಮಹಾಂತೇಶ ಬೀಳಗಿ, ಹಿರಿಯ ಅರೋಗ್ಯ ನಿರೀಕ್ಷಕ ಮಂಜುನಾಥ ಮುದಗಲ್, ದೂದನಾನಾ ದರ್ಗಾ ಕಮಿಟಿ ಸದಸ್ಯರು, ಸಾರ್ವಜನಿಕರು ಇದ್ದರು.

# ಕಾಳಿಕಾ ದೇವಸ್ಥಾನದಲ್ಲಿ ಪಲ್ಲಕ್ಕಿ ಸೇವೆ



■ವಿಜಯಸಾಕ್ಷಿ ಸುದ್ದಿ, ಗದಗ

ಇಲ್ಲಿನ ಬೆಟಗೇರಿಯ ಟರ್ನಲ್ ಪೇಟೆಯಲ್ಲಿರುವ ಶ್ರೀಕಾಳಿಕಾದೇವಿ ದೇವಸ್ಥಾನದಲ್ಲಿ ಮಣ್ಣೆತ್ತಿನ ಅಮಾವಾಸ್ಯೆ ಪ್ರಯುಕ್ತ ಪಾಲಕಿ ಉತ್ಸವ ಸೇವೆ ಹಾಗೂ ಸುಮಂಗಲಿಯರಿಂದ ದೇವಿಸ್ತುತಿ, ಪೂಜಾ ಕಾರ್ಯಕ್ರಗಳು ಜರುಗಿದವು.

ಪಾಲಕಿ ಉತ್ಸವ ಸೇವೆಯನ್ನು ಸಮಾಜದ ಹಿರಿಯರು, ಸರ್ವೆ ಇಲಾಖೆಯ ನೌಕರರಾದ ಮಂಜುಳಾ ಪತ್ತಾರ ಹಾಗೂ ಬೆಟಗೇರಿ ಸರ್ಕಾರಿ ಪ್ರಾಥಮಿಕ ಶಾಲೆಯ ಮುಖ್ಯೋಪಾಧ್ಯಾಯರಾದ ಅಶೋಕ ಯ.ಪತಾರ(ಕಮ್ಮಾರ) ವಹಿಸಿಕೊಂಡಿದ್ದರು. ಟ್ರಸ್ಟಿನ ಹಿರಿಯರು ಹಾಗೂ ಜಾನಪದ ಕಲಾವಿದರಾದ ಅಶೋಕ ಸುತಾರ ಹಾಗೂ ಬೆಟಗೇರಿ ಕಾಳಿಕಾ ದೇವಿ ಟ್ರಸ್ಟ್ ಕಮಿಟಿ ಅಧ್ಯಕ್ಷ ಶ್ರೀಧರ ಕೊಣ್ಣೂರ ನೇತೃತ್ವದಲ್ಲಿ ಶ್ರೀಕಾಳಿಕಾದೇವಿ ಸ್ಮರಣೆಯೊಂದಿಗೆ ಪಲ್ಲಕ್ಕಿ ಉತ್ಸವ ಜರುಗಿತು.

ಶಿಕ್ಷಕರಾದ ವಿಶ್ವನಾಥ ಯ. ಕಮ್ಮಾರ ಮಣ್ಣೆತ್ತಿನ ಅಮಾವಾಸ್ಯೆಯ ವಿಶೇಶತೆ ಕುರಿತು ಮಾತನಾಡಿದರು. ಪಾಲಕಿ ಸೇವೆಯ ನಂತರ ಅರ್ಚಕರಾದ ಪ್ರಕಾಶ ಬಡಿಗೇರ ಅವರಿಂದ ಮಂಗಳಾರತಿ ಜರುಗಿತು. ಪಾಲಕಿ ಸೇವೆ ಸಲ್ಲಿಸಿದ ಮಂಜುಳಾ ಪತ್ತಾರ ಹಾಗೂ ಅಶೋಕ ಯ.ಪತ್ತಾರ, ಮುಖ್ಯ ಅತಿಥಿಗಳಾಗಿ ಪಾಲ್ಗೊಂಡ ಕರ್ನಾಟಕ ಬ್ಯಾಂಕ್ ವ್ಯವಸ್ಥಾಪಕ ಮನು ಹಾಗೂ ಕೀರ್ತಿ ಮನು ಅವರನ್ನು ಸನ್ಮಾನಿಸಲಾಯಿತು.

ಟ್ರಸ್ಟ್ ಕಮಿಟಿಯ ಸದಸ್ಯರಾದ ಅಶೋಕ ಸುತಾರ, ಗೋಪಾಲ ಬಡಿಗೇರ, ಮಹೇಶ ಬಡಿಗೇರ, ಕುಮಾರ ಬಡಿಗೇರ, ಶ್ರೀಕಾಂತ ಬಡಿಗೇರ, ರಾಘವೇಂದ್ರ ಬಡಿಗೇರ, ಉತ್ಸವ ಕಮಿಟಿ ಅಧ್ಯಕ್ಷರಾದ ವಿಜಯಕುಮಾರ ಬೆಂತೂರ, ಮನೋಜ ಬೆಂತೂರ, ಪ್ರಕಾಶ ಬಡಿಗೇರ ಸೇರಿದಂತೆ ಸಮಾಜದ ಹಿರಿಯರು, ಮಹಿಳೆಯರು ಪಾಲ್ಗೊಂಡಿದ್ದರು.

ಕಸಾಪ ಹಮ್ಮಿಕೊಂಡಿದ್ದ ದತ್ತಿ ಉಪನ್ಯಾಸಗಳ ಕಾರ್ಯಕ್ರಮ ಉದ್ಘಾಟಿಸಿದ ಸಾಹಿತಿ ಲಲಿತಕ್ಕ ಕೆರಿಮನಿ

# ಪುಲಿಗೆರೆಯ ತಿರುಳುಗನ್ನಡದ ಕೊಡುಗೆ ಅಪಾರ

■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಕನ್ನಡ ಸಾಹಿತ್ಯ ಶ್ರೇಷ್ಠ ಪರಂಪರೆಯ ಪ್ರತೀಕವಾಗಿದೆ. ಅದಕ್ಕೆ ಪುಲಿಗೆರೆಯ ತಿರುಳುಗನ್ನಡದ ಕೊಡುಗೆ ಅಪಾರವಾದದು. ಸಾಹಿತ್ಯ ಮನುಷ್ಯನ ಜೀವನದ ಅವಿಭಾಜ್ಯ ಅಂಗ. ಸಾಹಿತ್ಯವು ಒಂದು ಭಾಷೆಯ ಬೌದ್ಧಿಕ, ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸುತ್ತದೆ ಎಂದು ರಾಜ್ಯ ಪ್ರಶಸ್ತಿ ಪುರಸ್ಕೃತ ಹಿರಿಯ ಸಾಹಿತಿ ಲಲಿತಕ್ಕ ಕೆರಿಮನಿ ಹೇಳಿದರು.

ಅವರು ಲಕ್ಷ್ಮೇಶ್ವರ ತಾಲೂಕು ಕನ್ನಡ ಸಾಹಿತ್ಯ ಪರಿಷತ್ತಿನಿಂದ ಶ್ರೀ ಸಹಸ್ರಾರ್ಜುನ ಬಿಇಡಿ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ದತ್ತಿ ಉಪನ್ಯಾಸಗಳ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.



ಕಸಾಪ ಶಿಗ್ಲಿ ಹೋಬಳಿ ಘಟಕದ ಅಧ್ಯಕ್ಷ ರಾಜಣ್ಣ ರಜಪೂತ ಲಿಂಬಯ್ಯಸ್ವಾಮಿ ಪ್ರತಿಭಾ ಪ್ರತಿಷ್ಠಾನದ ದತ್ತಿಯಾದ 'ಜನಪದ ಸಾಹಿತ್ಯ ಮತ್ತು ಹಾಸ್ಯ' ಕುರಿತು ಮಾತನಾಡಿ, ಜನಪದ ಸಾಹಿತ್ಯ ಅದು ರೈತರ ಸಾಹಿತ್ಯ. ಮಹಿಳೆಯರ ಸಾಹಿತ್ಯ. ಗ್ರಾಮೀಣರ ಸಾಹಿತ್ಯ. ಅದು ಎಲ್ಲ ಸಾಹಿತ್ಯದ ತಾಯಿ ಎಂದರು.

ಹಿರಿಯ ಚಿಂತಕ ದೇವಣ್ಣ ಬಳಿಗಾರ, ಗದಗ ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನಿಂದ 'ಸುವರ್ಣ ಸಿರಿ' ಪ್ರಶಸ್ತಿ ಸ್ವೀಕೃತ ಸಾಹಿತಿ ಸಿ.ಆರ್. ಗೋಕಾವಿ ಮಾತನಾಡಿದರು.

ಕಸಾಪ ತಾಲೂಕಾ ಅಧ್ಯಕ್ಷ ಈಶ್ವರ ಮೆಡ್ಲೇರಿ ಮಾತನಾಡಿ, ತಾಲೂಕ ಘಟಕ ಈಗಾಗಲೇ 151 ಕಾರ್ಯಕ್ರಮಗಳನ್ನು ಯಶಸ್ವಿಯಾಗಿ ಸಂಘಟಿಸಿ ಮುಂದೆ ಸಾಗುತ್ತಿದೆ ಎಂದರು. ಮಹಾವಿದ್ಯಾಲಯದ ಪ್ರಾಚಾರ್ಯ ಆರ್.ಎಂ ಅಂಗಡಿ, ಮಹೇಶ ಲಿಂಬಯ್ಯಸ್ವಾಮಿಮಠ ಮಾತನಾಡಿದರು. ಮಹಾವಿದ್ಯಾಲಯದ ಅಧ್ಯಕ್ಷ ವಸಂತಸಾ ಖೋಡೆ, ಕಾರ್ಯದರ್ಶಿ ಕೃಷ್ಣಾಸಾ ಖೋಡೆ, ಸಾಹಿತಿ ಸಿ.ಜಿ. ಹಿರೇಮಠ, ಡಿ.ಎಫ್. ಪಾಟೀಲ, ಮುರಳೀಧರ ಹುಬ್ಬಳ್ಳಿ, ಕೋಟಿಮಠ, ಸುಶೀಲಾ ಹಿರೇಮಠ, ಸುಲೋಚನಾ ಜವಾಯಿ, ವಿ.ಎಮ್. ಹೂಗಾರ, ಉಪನ್ಯಾಸಕ ವರ್ಗ, ಪ್ರಶಿಕ್ಷಣಾರ್ಥಿಗಳು ಭಾಗವಹಿಸಿದ್ದರು. ಕಸಾಪ ಗೌರವ ಕಾರ್ಯದರ್ಶಿ ಮಂಜುನಾಥ ಚಾಕಲಬ್ಬಿ ಸೇರಿ ಪದಾಧಿಕಾರಿಗಳು ನಿರ್ವಹಿಸಿದರು.

> ಲಲಿತಾ ಮತ್ತು ಪ್ರೊ. ಸಿ.ವಿ. ಕೆರಿಮನಿ ದತ್ತಿ ವಿಷಯವಾದ 'ಭಾರತದ ಮೊದಲ ಮಹಿಳಾ ಶಿಕ್ಷಕಿ ಸಾವಿತ್ರಿಬಾಯಿ ಪುಲೆ' ವಿಷಯದ ಕುರಿತು ಮಾತನಾಡಿದ ಶಿಕ್ಷಕಿ ವೀಣಾ ಜಾದವ, ಇಡೀ ಮನುಕುಲ ಸಾವಿತ್ರಿಬಾಯಿ ಪುಲೆ ಅವರಿಗೆ ಋಣಿಯಾಗಿರಬೇಕು. ಇಂದು ಮಹಿಳೆಯರ ಬಗ್ಗೆ ಮಾತನಾಡುವ ನಾವೆಲ್ಲ ಅಂದಿನ ಪರಿಸ್ಥಿತಿಯನ್ನ ನೆನೆಯಬೇಕು. ಅಂತಹ ಕನಿಷ್ಠ ಪರಿಸ್ಥಿತಿಯನ್ನು ಮೀರಿ ಮಹಿಳೆಯರಿಗೆ ನ್ಯಾಯ ಒದಗಿಸಿಕೊಟ್ಟ ಕೀರ್ತಿ ಸಾವಿತ್ರಿಬಾಯಿ ಅವರಿಗೆ ಸಲ್ಲುತ್ತದೆ ಎಂದರು.

# ಸಮಾಜದ ಅಭಿವೃದ್ಧಿಗೆ ಕೈಜೋಡಿಸುವೆ



■ವಿಜಯಸಾಕ್ಷಿ ಸುದ್ದಿ, ಗದಗ

ಕಳಸಾಪೂರ ರಸ್ತೆಯ ಪಂಚಮಸಾಲಿ ಸೇವಾ ಟ್ರಸ್ಟ್‌ನ ವತಿಯಿಂದ 1 ಎಕರೆ ಪ್ರದೇಶದಲ್ಲಿ ನಿರ್ಮಾಣವಾಗುತ್ತಿರುವ ಬೃಹತ್ ಚನ್ನಮ್ಮ ಭವನ ಕಟ್ಟಡ ನಿರ್ಮಾಣ ಕಾಮಗಾರಿಯನ್ನು ವೀಕ್ಷಿಸಿದ ಮಾಜಿ ಮುಖ್ಯಮಂತ್ರಿ, ಹಾವೇರಿ–ಗದಗ ಲೋಕಸಭಾ ಕ್ಷೇತ್ರದ ಸಂಸದ ಬಸವರಾಜ ಬೊಮ್ಮಾಯಿಯವರಿಗೆ ಪಂಚಮಸಾಲಿ ಸೇವಾ ಟ್ರಸ್ಟ್‌ನ ಸದಸ್ಯರು ಸಂಸದರ ನಿಧಿಯಿಂದ 2 ಕೋಟಿ ರೂ ಅನುದಾನ ಒದಗಿಸುವಂತೆ ಮನವಿ ಸಲ್ಲಿಸಿದರು.

ಮನವಿ ಸ್ವೀಕರಿಸಿ ಮಾತನಾಡಿದ ಸಂಸದರು, ನಿಮ್ಮ ಸಮಾಜದ ಸರ್ವತೋಮುಖ ಅಭಿವೃದ್ಧಿಗೆ ಸಹಕಾರ ನಿಡುತ್ತೇನೆ. ನಿವು ಸಲ್ಲಿಸಿರುವ ಬೇಡಿಕೆಯನ್ನು ಪ್ರಾಮಾಣಿಕವಾಗಿ ಈಡೇರಿಸಲು ಪ್ರಯತ್ನಿಸುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ನರಗುಂದ ಶಾಸಕ ಸಿ.ಸಿ. ಪಾಟೀಲ, ಪಂಚಮಸಾಲಿ ಸೇವಾ ಟ್ರಸ್ಟ್‌ನ ಅಧ್ಯಕ್ಷ ಮೋಹನ ಮಾಳಶೆಟ್ಟಿ, ಉಪಾಧ್ಯಕ್ಷ ಸಿದ್ಧಪ್ಪ ಪಲ್ಲೇದ, ಕಾರ್ಯದರ್ಶಿ ಅನಿಲಕುಮಾರ ಪಾಟೀಲ, ಖಜಾಂಚಿ ವಿಜಯಕುಮಾರ ನೀಲಗುಂದ, ಸದಸ್ಯರಾದ ಶಾಂತಪ್ಪ ಮುಳವಾಡ, ಬಾಲಚಂದ್ರ ಭರಮಗೌಡ್ರ, ರಾಮನಗೌಡ ದಾನಪ್ಪಗೌಡ್ರ, ಶೇಖಣ್ಣ ಬೆಂತೂರ, ಪ್ರಕಾಶ ಮ್ಯಾಗೇರಿ, ಮಾಲತೇಶ ಪಾಟೀಲ, ಸಿದ್ಧನಗೌಡ ಪಾಟೀಲ, ಮಾಲತೇಶಗೌಡ ಹಿರೇಮನಿಪಾಟೀಲ, ಶಂಕರ ಕರಿಬಿಷ್ಠಿ, ಸುರೇಶ ಚಿತ್ತರಗಿ, ವಿಶ್ವನಾಥ ಹಳ್ಳಿಕೇರಿ, ಸಿದ್ಧಲಿಂಗೇಶ ಕರಿಬಿಷ್ಠಿ, ವಸಂತ ಪಡಗದ, ಸಂಗಮೇಶ ಕವಳಿಕಾಯಿ, ಶಿವರಾಜಗೌಡ ಹಿರೇಮನಿಪಾಟೀಲ, ಶರಣಪ್ಪ ಬೋಳನವರ, ಸಂತೋಷ ಅಕ್ಕಿ, ಸಂತೋಷ ಕಬಾಡರ, ಉದಯರವಿ ಗುಡಿಮನಿ, ವೀರಣ್ಣ ಮೇಟಿ ಮುಂತಾದವರಿದ್ದರು.

# 'ಭಾರತ-ಪಾಕ್ ಯುದ್ಧ ತಡೆದಿದ್ದು ನಾನೇ' ಶ್ವೇತಭವನದಲ್ಲಿ ಪುನರುಚ್ಚರಿಸಿದ ಟ್ರಂಪ್

■ವಿಜಯಸಾಕ್ಷಿ ಸುದ್ದಿ, ವಾಷಿಂಗ್ಟನ್

ಭಾರತ ಮತ್ತು ಪಾಕಿಸ್ತಾನದ ನಡುವಿನ ಯುದ್ಧವನ್ನು ತಾನೇ ನಿಲ್ಲಿಸಿದ್ದು ಎಂದು ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಶುಕ್ರವಾರ ಮತ್ತೊಮ್ಮೆ ತಮ್ಮ ಹಿಂದಿನ ಹೇಳಿಕೆಯನ್ನು ಪುನರುಚ್ಚರಿಸಿದ್ದಾರೆ. ತಮ್ಮ ಆಡಳಿತದ ಅಧಿಕಾರಿಗಳಿಗೆ ಆ ದೇಶಗಳೊಂದಿಗಿನ ಎಲ್ಲಾ ಒಪ್ಪಂದಗಳನ್ನು ರದ್ದುಪಡಿಸಿ ಎಂದು ಬೆದರಿಕೆ ಹಾಕಿದ ನಂತರವೇ ಎರಡೂ ದೇಶಗಳು ಯುದ್ಧವನ್ನು ನಿಲ್ಲಿಸಲು ಒಪ್ಪಿದವು ಎಂದು ಟ್ರಂಪ್ ಹೇಳಿಕೊಂಡಿದ್ದಾರೆ.

ಶ್ವೇತಭವನದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಟ್ರಂಪ್, ಯುಎಸ್ ಸುಪ್ರೀಂ ಕೋರ್ಟ್‌ನ ಹಲವು ತೀರ್ಪುಗಳ ಕುರಿತು ಪ್ರಸ್ತಾಪಿಸಿದರು. "ನಾವು ಕೆಲವು ಉತ್ತಮ ಕೆಲಸಗಳನ್ನು ಮಾಡಿದ್ದೇವೆ. ಭಾರತ ಮತ್ತು ಪಾಕಿಸ್ತಾನದ ನಡುವೆ ಬಹುಶಃ ಅಣು ಯುದ್ಧ ನಡೆಯಬಹುದಿತ್ತು. ನಾವು ಅದನ್ನು ನಿಲ್ಲಿಸಿದೆವು. ನಾವು ಸಾಕಷ್ಟು ಕೆಲಸ ಮಾಡಿದ್ದೇವೆ. ಇಷ್ಟು ಹೆಚ್ಚು ಕೆಲಸ ಮಾಡಿದ ಅಧ್ಯಕ್ಷರು ಯಾರಾದರೂ ಇದ್ದಾರೆಯೇ ಎಂದು ನನಗೆ ಗೊತ್ತಿಲ್ಲ," ಎಂದು ಅವರು ಹೇಳಿದರು.

# ಅರ್ಜಿದಾರರ ಸಮಾಲೋಚನಾ ಸಭೆ ಇಂದು

■ವಿಜಯಸಾಕ್ಷಿ ಸುದ್ದಿ, ಗದಗ

ಗದಗ–ಬೆಟಗೇರಿ ಸಾರ್ವಜನಿಕರ ಕ್ಷೇಮಾಭಿವೃದ್ಧಿ ಸಂಘವು ಗದುಗಿನ ವಿದ್ಯಾದಾನ ಶಿಕ್ಷಣ ಸಮಿತಿಯ ಆವರಣದಲ್ಲಿ ಜೂ. 29ರಂದು ಮುಂಜಾನೆ 10 ಗಂಟೆಗೆ ಆಪ್ತ ಸಮಾಲೋಚನಾ ಸಮಾರಂಭವನ್ನು ಏರ್ಪಡಿಸಿದೆ.

1999ರಲ್ಲಿ ಗದಗ–ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಿವೇಶನಕ್ಕಾಗಿ ಅರ್ಜಿ ಸಲ್ಲಿಸಿದ ಅರ್ಜಿದಾರರಿಗೆ ನಿವೇಶನವೂ ದೊರೆಯದೇ, ಹಣವೂ ವಾಪಸ್ಸು ಕೊಡದೇ ಇರುವ ಕಾರಣದಿಂದಾಗಿ ನ್ಯಾಯ ಕೋರಿ ನ್ಯಾಯಾಲಯದಲ್ಲಿ ಹೂಡಿದ್ದ ದಾವೆಗೆ ನ್ಯಾಯಾಲಯವು ತೀರ್ಪು ನೀಡಿದ್ದು, ಈ ಕುರಿತು ಆಪ್ತ ಸಮಾಲೋಚನೆಗೆ ಈ ಸಮಾರಂಭ ಏರ್ಪಡಿಸಲಾಗಿದೆ.

ಧಾರವಾಡದ ಹೈಕೋರ್ಟ್ ನ್ಯಾಯವಾದಿಗಳಾದ ಎಸ್.ಎಲ್. ಮಟ್ಟಿ ಮುಖ್ಯ ಅತಿಥಿಗಳಾಗಿ ಆಗಮಿಸಿ ಅರ್ಜಿದಾರರನ್ನು ಉದ್ದೇಶಿಸಿ ಮಾತನಾಡಿ, ಮಾರ್ಗದರ್ಶನ ನೀಡುವರು. ಮುಖ್ಯ ಅತಿಥಿಗಳಾಗಿ ಸಾಮಾಜಿಕ ಚಿಂತಕ ಡಾ. ಬಸವರಾಜ ಧಾರವಾಡ, ವಿದ್ಯಾದಾನ ಶಿಕ್ಷಣ ಸಮಿತಿಯ ಅಧ್ಯಕ್ಷ ಧೀರೇಂದ್ರ ಹುಯಿಲಗೋಳ, ಗೌರವ ಕಾರ್ಯದರ್ಶಿ ಶ್ರೀನಿವಾಸ ಹುಯಿಲಗೋಳ ಆಗಮಿಸುವರು.

ಸಂಘದ ಅಧ್ಯಕ್ಷ ಮೌಲಾಸಾಬ ಗುಡಸಲಮನಿ ಅಧ್ಯಕ್ಷತೆ ವಹಿಸುವರು. ಕಾರ್ಯದರ್ಶಿ ಜಾಫರುಲ್ಲಾ ಬೇಲೇರಿ ಸೇರಿದಂತೆ ಸಮಿತಿಯ ಸರ್ವ ಪದಾಧಿಕಾರಿಗಳು ಉಪಸ್ಥಿತರಿರುವರು. ಅರ್ಜಿದಾರರು ಸಕಾಲಕ್ಕೆ ಆಗಮಿಸಲು ಕಾರ್ಯದರ್ಶಿ ಜಾಫರುಲ್ಲಾ ಬೇಲೇರಿ ವಿನಂತಿಸಿದ್ದಾರೆ.

# ಕೌಶಲ್ಯದೊಂದಿಗೆ ಮೌಲ್ಯಗಳನ್ನು ಅಳವಡಿಸಿಕೊಳ್ಳಿ

■ವಿಜಯಸಾಕ್ಷಿ ಸುದ್ದಿ, ಡಂಬಳ

ಕಲಿಕೆ ನಿರಂತರ ಪ್ರಕ್ರಿಯಾಗಿರುವುದರಿಂದ ವಿದ್ಯಾರ್ಥಿಗಳು ತಮ್ಮ ಜೀವನದುದ್ದಕ್ಕೂ ಅಧ್ಯಯನದ ಜೊತೆಯಲ್ಲಿ ಕೌಶಲ್ಯಯುತ ತರಬೇತಿ ಶಿಕ್ಷಣ ಪಡೆದುಕೊಳ್ಳಬೇಕು ಎಂದು ಪ್ರಾಚಾರ್ಯ ಎಸ್.ಎಂ. ಶಿವಾಚಾರ್ಯ ಹೇಳಿದರು.

ಅವರು ಡಂಬಳ ಗ್ರಾಮದ ಜಗದ್ಗುರು ತೋಂಟದಾರ್ಯ ವಿದ್ಯಾಪೀಠದ ಜಗದ್ಗುರು ತೋಂಟದಾರ್ಯ ಖಾಸಗಿ ಕೈಗಾರಿಕಾ ತರಬೇತಿ ಸಂಸ್ಥೆಯ ತರಬೇತಿ ಮುಗಿಸಿದ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡುತ್ತಿದ್ದರು. ವಿದ್ಯಾರ್ಥಿಗಳು ತಮ್ಮ ಕೌಶಲ್ಯಗಳನ್ನು ಅಭಿವೃದ್ಧಿ ಪಡಿಸಿಕೊಳ್ಳಲು ವಿವಿಧ ಪ್ರತಿಷ್ಠಿತ ಕಂಪನಿಗಳಲ್ಲಿ ಒಂದು ವರ್ಷದ ತರಬೇತಿ ಜೊತೆಯಲ್ಲಿ ಸಂಬಳ ನೀಡುತ್ತಿದ್ದು, ಪ್ರತಿಯೊಬ್ಬ ವಿದ್ಯಾರ್ಥಿ ಇದರ ಸದುಪಯೋಗವನ್ನು ಪಡೆದುಕೊಳ್ಳುವುದರ ಜೊತೆಯಲ್ಲಿ ಮೌಲ್ಯಗಳನ್ನು ಅಳವಡಿಸಿಕೊಳ್ಳಬೇಕು ಎಂದರು.




ಆರ್.ಜಿ. ಕೊರ್ಲಹಳ್ಳಿ ಮಾತನಾಡಿ, ಇಂದು ಆಧುನಿಕ ತಂತ್ರಜ್ಞಾನ ಬೆಳೆದಂತೆಲ್ಲಾ ಸಾಕಷ್ಟು ಕಂಪನಿಗಳು ಕೌಶಲ್ಯ ಹೊಂದಿರುವ ವಿದ್ಯಾರ್ಥಿಗಳಿಗೆ ಸಾಕಷ್ಟು ಅವಕಾಶಗಳನ್ನು ನೀಡುತ್ತಿವೆ. ತಂದೆ, ತಾಯಿ, ಗುರುಗಳು ಹೇಳುವ ಮೌಲ್ಯಯುತ ಮಾತುಗಳನ್ನು ಪಾಲಿಸುವುದರಿಂದ ಉತ್ತಮ ಪ್ರಜೆಗಳಾಗಿ ಹೊರಹೊಮ್ಮಲು ಸಾಧ್ಯವಾಗುತ್ತದೆ ಎಂದರು. ಅಧ್ಯಕ್ಷತೆಯನ್ನು ಪ್ರಾಚಾರ್ಯ ಎಸ್.ಎಂ. ಶಿವಾಚಾರ್ಯ, ಜಿ. ಮಹೇಶಗೌಡ, ಆರ್.ಜಿ. ಕೊರ್ಲಹಳ್ಳಿ, ಎಸ್.ಎಸ್. ಕುಂಬಾರ, ಬಿ.ಎಂ. ಪಾಟೀಲ ಹಾಗೂ ವಿ.ಡಿ. ಸಿದ್ದನಗೌಡರ ಇದ್ದರು.

ನಾಳೆಯಿಂದ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನದಿಂದ ಸರ್ಕಾರಿ ಶಾಲೆಯ ಪ್ರತಿಭೆಗಳಿಗೆ ಪ್ರೋತ್ಸಾಹ

# 150 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ

■ವಿಜಯಸಾಕ್ಷಿ ಸುದ್ದಿ, ಗದಗ

ಗದುಗಿನ ಶಿಕ್ಷಣಪ್ರೇಮಿ, ತ್ಯಾಗಜೀವಿ ಶ್ರೀ ಬಿ.ಜಿ. ಅಣ್ಣಿಗೇರಿ ಗುರುಗಳ ಪ್ರತಿಭಾ ಪ್ರತಿಷ್ಠಾನವು ಗದಗ ತಾಲೂಕಿನ ಸರ್ಕಾರಿ ಶಾಲೆಯಲ್ಲಿ ವಿದ್ಯಾಭ್ಯಾಸಗೈದು ಎಸ್.ಎಸ್.ಎಲ್.ಸಿ ವಾರ್ಷಿಕ ಪರೀಕ್ಷೆಯಲ್ಲಿ ಆಯಾ ಶಾಲೆಗೆ ಮೊದಲ 5 ಸ್ಥಾನಗಳನ್ನು ಪಡೆದ ವಿದ್ಯಾರ್ಥಿ–ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರ ನೀಡಲಿದೆ.

ಪ್ರತಿಷ್ಠಾನದ ಗೌರವ ಅಧ್ಯಕ್ಷರಾದ ಜ. ಡಾ. ತೋಂಟದ ಸಿದ್ಧರಾಮ ಮಹಾಸ್ವಾಮಿಗಳ ಮಾರ್ಗದರ್ಶನದಲ್ಲಿ ಶಿಕ್ಷಣ ಇಲಾಖೆಯ ಡಿಡಿಪಿಐ ಆರ್.ಎಸ್. ಬುರಡಿ, ಬಿಇಓ, ಶಾಲಾ ಮುಖ್ಯೋಪಾಧ್ಯಾಯರು, ಪ್ರತಿಷ್ಠಾನದ ಎಲ್ಲ ಪದಾಧಿಕಾರಿಗಳ ಸಹಕಾರದೊಂದಿಗೆ ಹಮ್ಮಿಕೊಂಡಿರುವ ಈ ಪ್ರತಿಭಾ ಪುರಸ್ಕಾರ ಮಾಲಿಕೆ 10 ದಿನಗಳಲ್ಲಿ ಗದಗ ನಗರ ಹಾಗೂ ಗದಗ ತಾಲೂಕಿನ ಒಟ್ಟು 30 ಶಾಲೆಗಳಿಗೆ ಭೇಟಿ ನೀಡಿ 150 ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಲಾಗುವದು ಎಂದು ಪ್ರತಿಷ್ಠಾನದ ಅಧ್ಯಕ್ಷ ಶಿವಕುಮಾರ ಎಚ್.ಪಾಟೀಲ ತಿಳಿಸಿದ್ದಾರೆ.



11ನೇ ವರ್ಷದ ಈ ಪ್ರತಿಭಾ ಪುರಸ್ಕಾರವನ್ನು ಆಯಾ ಶಾಲೆಗಳಲ್ಲಿ ಎಲ್ಲ ವಿದ್ಯಾರ್ಥಿಗಳು ಸಮ್ಮುಖದಲ್ಲಿಯೇ ನೀಡಿ ಗೌರವಿಸುವ ಪ್ರತಿಭಾ ಪುರಸ್ಕಾರ ಮಾಲಿಕೆಯು ಜೂ. 30ರಿಂದ ಜುಲೈ 10ರವರೆಗೆ ನಿರಂತರವಾಗಿ ನಡೆಯಲಿದೆ. ಪ್ರತಿಭಾ ಪುರಸ್ಕಾರ ಸಮಿತಿಯ ತಂಡವು ಆಯಾ ಗ್ರಾಮದ ಶಾಲೆಯ ಬಾಗಿಲಿಗೆ ಹೋಗಿ ನಗದು ಬಹುಮಾನ, ಅಭಿನಂದನಾ ಪತ್ರ, ಕಾಲೇಜು ಬ್ಯಾಗ್ ನೀಡಿ ಗೌರವಿಸಲಿದೆ.

> ಗದಗ ತಾಲೂಕಿನ 30 ಸರ್ಕಾರಿ ಶಾಲೆಯ 150 ವಿದ್ಯಾರ್ಥಿಗಳಿಗೆ ಒಟ್ಟು 1 ಲಕ್ಷ 22 ಸಾವಿರ ರೂ.ಗಳ ಪ್ರತಿಭಾ ಪುರಸ್ಕಾರ ಹಾಗೂ ಬಿ.ಜಿ. ಅಣ್ಣಿಗೇರಿ ಗುರುಗಳ ಆಶ್ರಮದಲ್ಲಿ ಟ್ಯೂಶನ್ ಪಡೆದುಕೊಂಡು ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಶೇ. 85ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ 25 ವಿದ್ಯಾರ್ಥಿಗಳಿಗೆ ಒಟ್ಟು 35 ಸಾವಿರ ರೂ.ಗಳ ಪ್ರತಿಭಾ ಪುರಸ್ಕಾರವನ್ನು ಪ್ರತ್ಯೇಕವಾಗಿ ಅಣ್ಣಿಗೇರಿ ಗುರುಗಳ ಜನ್ಮದಿನದ ಕಾರ್ಯಕ್ರಮದಲ್ಲಿ ನೀಡಲಾಗುವದು.
>
> – ಶಿವಕುಮಾರ ಎಚ್.ಪಾಟೀಲ.
> ಅಧ್ಯಕ್ಷರು, ಪ್ರತಿಭಾ ಪ್ರತಿಷ್ಠಾನ.

ಜೂ. 30ರಂದು ಮುಳಗುಂದ, ಕಣವಿ, ಜು–1 ಹೊಂಬಳ, ಲಿಂಗದಾಳ, ಕದಡಿ. ಜು–2 ಬೆಳಹೊಡ, ಶ್ಯಾಗೋಟಿ, ಹಿರೇಹಂದಿಗೋಳ, ಜು–3 ಬೆಂತೂರು, ಹುಲಕೋಟಿ. ಜು–4 ಸೊರಟೂರ, ಯಲಿಶಿರೂರ, ಶಿರುಂಜ, ಜು–5 ಹರ್ಲಾಪೂರ, ಹಾತಲಗೇರಿ, ಜು–7 ಅಡವಿಸೋಮಾಪೂರ, ನಾಗಾವಿ, ಲಕ್ಕುಂಡಿ, ಜು–8 ಕೋಟುಮಚಗಿ, ನೀರಲಗಿ, ಕಣಗಿನಹಾಳ, ಜು–9 ಗದಗ ರಾಜೀವ ಗಾಂಧಿ ನಗರ, ಗದಗ ಎಸ್‌ಎಂಕೆ ನಗರ, ಬೆಟಗೇರಿ ಗಾಂಧಿ ನಗರ, ಜು–10ರಂದು ಗದಗ ಸಿದ್ಧಲಿಂಗ ನಗರ ಹಾಗೂ ಗದುಗಿನ ಸರ್ಕಾರಿ ಉರ್ದು ಶಾಲೆಯಲ್ಲಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮ ಜರುಗಲಿವೆ. ಪ್ರತಿಷ್ಠಾನದ ಉಪಾಧ್ಯಕ್ಷ ಶಂಕ್ರಪ್ಪ ಅಣ್ಣಿಗೇರಿ, ಕಾರ್ಯದರ್ಶಿ ಸುಭಾಸಚಂದ್ರ ಬೆಟದೂರ, ಖಜಾಂಚಿ ವಿಜಯಲಕ್ಷ್ಮೀ ಅಂಗಡಿ, ನಿರ್ದೇಶಕರಾದ ಡಾ. ಶರಣಬಸವ ಚೌಕಿಮಠ, ಡಾ. ಬಸಯ್ಯ ಬೆಳ್ಳೇರಿಮಠ, ಶಿವಪ್ಪ ಕತ್ತಿ, ಆಂಜನೇಯ ಕಟಗಿ, ಸಿದ್ಧಲಿಂಗನಗೌಡ ಪಾಟೀಲ, ಡಾ. ಬಸವರಾಜ ಚನ್ನಪ್ಪಗೌಡ್ರ ಈ ಕಾರ್ಯಕ್ಕೆ ಸಾಥ್ ನೀಡಲಿದ್ದಾರೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka